ಸಂಪುಟ : 8 ಸಂಚಿಕೆ : 256 ಪುಟ : 4 ಬೆಲೆ : 3.00 ರವಿವಾರ ನವ್ವಂಬರ್ 19, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 256 Pages : 4 Price : 3.00 Sunday November 19, 2023 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಗದಗ ಜಿಲ್ಲಾ ಮಟ್ಟದ 'ಯುವಜನೋತ್ಸವ'ಕ್ಕೆ ಚಾಲನೆ ನೀಡಿದ ಸಚಿವ ಎಚ್.ಕೆ. ಪಾಟೀಲ

# ಯುವ ಕಲಾವಿದರಿಗೂ ಸೂಕ್ತ ಪ್ರೋತ್ಸಾಹ ದೊರಕಲಿ



> ದಸರಾ ಕ್ರೀಡಾಕೂಟದಲ್ಲಿ ಜಿಲ್ಲೆಯ ಯುವ ಪ್ರತಿಭೆಗಳು ಉತ್ತಮ ಸಾಧನೆಗೈಯುವ ಮೂಲಕ ಪದಕಗಳನ್ನು ಮುಡಿಗೇರಿಸಿಕೊಂಡಿವೆ. ಎಸ್.ಎಮ್. ಕೃಷ್ಣ ನಗರದ ಯುವಕ ನಂದಕುಮಾರ್ ಅವರು ಚೆಸ್ ಸ್ಪರ್ಧೆಯಲ್ಲಿ ರಾಷ್ಟ್ರಮಟ್ಟದ ಸಾಧನೆಗೈದಿದ್ದಾರೆ. ಹಾಕಿಯಲ್ಲಿ ಹರೀಶ ಮುಟಗಾರ, ಏಷಿಯನ್ ಸ್ಕೈಕ್ಲಿಂಗ್ ಜ್ಯೂನಿಯರ್ಸ್‌ನಲ್ಲಿ ಪವಿತ್ರಾ ಕುರ್ತಕೋಟಿ, ಕುಸ್ತಿಯಲ್ಲಿ ಪ್ರೇಮಾ ಹುಚ್ಚಣ್ಣವರ ರಾಷ್ಟ್ರ ಮಟ್ಟದಲ್ಲಿ ಗದಗ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ. ಅಂತೆಯೇ ಯುವಜನೋತ್ಸವ ಕಾರ್ಯಕ್ರಮದ ಮೂಲಕ ಯುವ ಕಲಾವಿದರು ಈ ವೇದಿಕೆಯನ್ನೂ ಸದ್ಬಳಕೆ ಮಾಡಿಕೊಳ್ಳುವ ಮೂಲಕ ರಾಜ್ಯ, ರಾಷ್ಟ್ರ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆಗೈದು ಗದಗ ಜಿಲ್ಲೆಗೆ ಹೆಸರು ತರುವಂತಾಗಲಿ.
>
> **– ಎಚ್.ಕೆ. ಪಾಟೀಲ.**
> ಸಚಿವರು.



**■ವಿಜಯಸಾಕ್ಷಿ ಸುದ್ದಿ, ಗದಗ**

ನಾಡಿನ ಪ್ರಸಿದ್ಧ ಕಲಾವಿದರಿಗೆ ಸಾರ್ವಜನಿಕ ಸಮಾರಂಭಗಳಲ್ಲಿ ನೀಡುವ ಶಿಳ್ಳೆ, ಚಪ್ಪಾಳೆ, ಪ್ರೋತ್ಸಾಹವನ್ನು ಸ್ಥಳೀಯ ಯುವ ಕಲಾವಿದರಿಗೂ ನೀಡುವ ಮೂಲಕ ಪ್ರೋತ್ಸಾಹಿಸುವ ಕಾರ್ಯವಾಗಲಿ ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ನುಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಯುವ ಸಂಘಗಳ ಒಕ್ಕೂಟ, ಆದರ್ಶ ಶಿಕ್ಷಣ ಸಮಿತಿಯ ಡಿ.ಎಸ್. ಕುರ್ತಕೋಟಿ ಮೆಮೋರಿಯಲ್ ಪದವಿಪೂರ್ವ ವಾಣಿಜ್ಯ ಮಹಾವಿದ್ಯಾಲಯ ಸಹಯೋಗದಲ್ಲಿ ಶನಿವಾರ ನಗರದ ಆದರ್ಶ ಶಿಕ್ಷಣ ಸಮಿತಿಯ ಸುವರ್ಣ ಮಹೋತ್ಸವ ಭವನದಲ್ಲಿ ಜರುಗಿದ ಗದಗ ಜಿಲ್ಲಾ ಮಟ್ಟದ ಪ್ರಸಕ್ತ ಸಾಲಿನ 'ಯುವಜನೋತ್ಸವ' ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಗದಗ ಜಿಲ್ಲೆಯ ವ್ಯಾಪ್ತಿಯ ಪ್ರತಿ 15 ಕಿ.ಮೀ ಅಂತರದಲ್ಲಿ ಸಾಹಿತ್ಯ, ಸಂಗೀತ, ಸಂಸ್ಕೃತಿ, ಸಂಪ್ರದಾಯ, ಕ್ರೀಡೆ ಸೇರಿದಂತೆ ವಿವಿಧ ರಂಗಗಳಲ್ಲಿ ಸಾಧನೆಗೈದ ರಾಷ್ಟ್ರ, ಅಂತಾರಾಷ್ಟ್ರೀಯ ಮಟ್ಟದ ಮಹನೀಯರನ್ನು ಕಾಣಬಹುದು. ಈ ಸಾಧನೆ ಗದಗ ಜಿಲ್ಲೆಯ ಹೆಮ್ಮೆಯ ವಿಷಯ. ಸಂಗೀತ ಕ್ಷೇತ್ರದಲ್ಲಿ 'ಭಾರತ ರತ್ನ' ಪ್ರಶಸ್ತಿಗೆ ಭಾಜನರಾದ ಜಿಲ್ಲೆಯವರಾದ ಪಂ. ಭೀಮಸೇನ ಜೋಶಿಯವರೊಬ್ಬರೇ ಈವರೆಗೂ ಸಂಗೀತ ಕ್ಷೇತ್ರಕ್ಕೆ ಭಾರತರತ್ನ ಪಡೆದವರಾಗಿದ್ದಾರೆ ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ಯುವಜನೋತ್ಸವ ಕಾರ್ಯಕ್ರಮ ಉದ್ಘಾಟಿಸುವುದು ತುಂಬಾ ಸಂತೋಷವೆನಿಸುತ್ತದೆ. ಮೊನ್ನೆ ನವೆಂಬರ್ 1ರಿಂದ 3ರವರೆಗೆ ನಗರದಲ್ಲಿ ನಡೆದ ಕರ್ನಾಟಕ ಸಂಭ್ರಮ ಕಾರ್ಯಕ್ರಮದಲ್ಲಿ ಯುವಜನತೆಯ ಪಾಲ್ಗೊಳ್ಳುವಿಕೆ ಮುಖ್ಯವಾಗಿತ್ತು. ಅಲ್ಲದೇ ಮೂರೂ ದಿನಗಳ ಸಾಯಂಕಾಲ ನಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ನಾಡಿನ ಪ್ರಸಿದ್ಧ ಕಲಾವಿದರು ವಿವಿಧ ಕಲಾಪ್ರಕಾರಗಳಿಂದ ಅದ್ಭುತ ಕಾರ್ಯಕ್ರಮ ನೀಡಿದರು. ಕಾರ್ಯಕ್ರಮದ ಯಶಸ್ಸಿಗೆ ಯುವಜನರ ಪಾಲ್ಗೊಳ್ಳುವಿಕೆ ಪ್ರಮುಖವಾಗಿತ್ತು ಎಂದರು. ಗದಗ ಜಿಲ್ಲೆ ಕಲೆ, ಸಂಸ್ಕೃತಿ, ಪರಂಪರೆ, ಸಾಹಿತ್ಯ, ಇತಿಹಾಸ ಹಾಗೂ ಕ್ರೀಡಾ ಕ್ಷೇತ್ರ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿನ ಸಾಧನೆಯಂತೆ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಾದ ಅನ್ನಭಾಗ್ಯ, ಗೃಹಲಕ್ಷ್ಮೀ, ಗೃಹ ಜ್ಯೋತಿ ಹಾಗೂ ಶಕ್ತಿ ಯೋಜನೆ ಅನುಷ್ಠಾನದಲ್ಲಿ ಜಿಲ್ಲಾಡಳಿತದ ಕಾರ್ಯ ರಾಜ್ಯಮಟ್ಟದಲ್ಲಿಯೇ ಉತ್ತಮವಾಗಿರುವುದು ಸಂತಸ ತಂದಿದೆ ಎಂದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಜಗತ್ತಿನಲ್ಲಿ ಹೆಚ್ಚು ಯುವಜನರನ್ನು ಹೊಂದಿದ ರಾಷ್ಟ್ರ ಭಾರತ. ಯುವಜನರು ಮನಸ್ಸು ಮಾಡಿದರೆ ಅಸಾಧ್ಯವೆಂಬುದು ಯಾವುದೂ ಇಲ್ಲ. ಯುವಜನತೆಗೆ ಸಾಧನೆಗೈಯಲು ಅಗತ್ಯ ಪ್ರೋತ್ಸಾಹ, ಸಹಕಾರ ನೀಡಬೇಕು. ಶಿಕ್ಷಣವೆಂದರೆ ಕೇವಲ ಪಠ್ಯಕ್ಕೆ ಸೀಮಿತವಾಗದೇ, ಪಠ್ಯೇತರ ಚಟುವಟಿಕೆಗಳಲ್ಲಿಯೂ ವಿಕಸನ ಹೊಂದಬೇಕು. ಯುವಜನರೂ ಸಹ ದೇಶದ ಸಂಪತ್ತೆಂದು ನೋಡುವ ಮನೋಭಾವ ನಮ್ಮದಾಗಬೇಕಿದೆ. ಇತ್ತೀಚೆಗೆ ಪಾಶ್ಚಿಮಾತ್ಯ ಸಾಹಿತ್ಯದ ಪ್ರಭಾವ ಮಿತಿಮೀರುತ್ತಿದೆ. ದೇಶೀಯ ಸಾಹಿತ್ಯ, ಸಂಸ್ಕೃತಿ ಬೆಳೆಸುವ ಹಾಗೂ ಉಳಿಸುವ ಮನೋಭಾವನೆ ಮೈಗೂಡಿಸಿಕೊಳ್ಳಬೇಕಿದೆ ಎಂದರು.

ವೇದಿಕೆಯಲ್ಲಿ ಜಿಲ್ಲಾ ಯುವ ಸಂಘಗಳ ಒಕ್ಕೂಟದ ಅಧ್ಯಕ್ಷ ರವಿಕಾಂತ ಅಂಗಡಿ, ಆದರ್ಶ ಶಿಕ್ಷಣ ಸಮಿತಿ ಕಾರ್ಯದರ್ಶಿ ಗೋಡಖಿಂಡಿ, ಡಿ.ಎಸ್. ಕುರ್ತಕೋಟಿ ಮೆಮೋರಿಯಲ್ ಪದವಿಪೂರ್ವ ವಾಣಿಜ್ಯ ಮಹಾವಿದ್ಯಾಲಯದ ಪ್ರಾಚಾರ್ಯ ರವೀಂದ್ರ ಕುಲಕರ್ಣಿ, ಜಿ.ಪಂ. ಮಾಜಿ ಅಧ್ಯಕ್ಷ ಸಿದ್ಧು ಪಾಟೀಲ ಉಪಸ್ಥಿತರಿದ್ದರು.

ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ ಅತಿಥಿಗಳನ್ನು ಸ್ವಾಗತಿಸಿ ಪ್ರಾಸ್ತಾವಿಕ ಮಾತನಾಡಿದರು. ಬಾಹುಬಲಿ ಜೈನರ ಕಾರ್ಯಕ್ರಮ ನಿರ್ವಹಿಸಿದರು.

---

### ಬರಗಾಲದ ವಸ್ತುಸ್ಥಿತಿ ಅಧ್ಯಯನ ನಡೆಸಿದ ಮಾಜಿ ಸಚಿವ ಆಲ್ಕೋಡ್ ಹನಮಂತಪ್ಪ

# ಜನರ ಕಷ್ಟಕ್ಕೆ ಸರ್ಕಾರ ಸ್ಪಂದಿಸಲಿ



> ಈಗಾಗಲೇ ಗದಗ ಜಿಲ್ಲೆಯಲ್ಲಿ 21 ರೈತರ ಆತ್ಮಹತ್ಯೆ ಪ್ರಕರಣಗಳಾಗಿವೆ. ನರೇಗಾ ಕೆಲಸಗಳೂ ಪ್ರಾರಂಭವಾಗಿಲ್ಲ. ರೈತರಿಗೆ ನೀಡುತ್ತಿದ್ದ ಸಹಾಯಧನ, ಪಿಂಚಣಿ, ವಿದ್ಯಾರ್ಥಿವೇತನಗಳೂ ಬಂದ್ ಆಗಿವೆ. ಅಭಿವೃದ್ಧಿ ಕೆಲಸಗಳಿಗಂತೂ ಗ್ರಹಣ ಹಿಡಿದಿದೆ. ರಸ್ತೆಗಳ ಸ್ಥಿತಿಯಂತೂ ಅಧೋಗತಿ. ಅಭಿವೃದ್ಧಿ ಕಾಮಗಾರಿ ನಡೆಸಿದ ಗುತ್ತಿಗೆದಾರರಿಗೆ ಹಣ ಸಂದಾಯವಾಗದ ಹಿನ್ನೆಲೆಯಲ್ಲಿ ಅವರು ಸಹ ಹಿಡಿಶಾಪ ಹಾಕುತ್ತಿದ್ದಾರೆ. ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸುವುದೇ ಕಷ್ಟವಾಗಿರುವ ಪರಿಸ್ಥಿತಿಯಲ್ಲಿ ಬರಗಾಲದ ಸಂಕಷ್ಟಕ್ಕೆ ಸಿಲುಕಿರುವ ಜನರ ಗೋಳು ಕೇಳುವವರೇ ಇಲ್ಲದಂತಾಗಿದೆ.
>
> **– ಆಲ್ಕೋಡ್ ಹನಮಂತಪ್ಪ.**
> ಮಾಜಿ ಸಚಿವರು, ಜೆಡಿಎಸ್ ರಾಜ್ಯ ಕಾರ್ಯಾಧ್ಯಕ್ಷರು.

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ರಾಜ್ಯದಲ್ಲಿ ಹಿಂದೆಂದೂ ಕಂಡರಿಯದ ಭೀಕರ ಬರಗಾಲ ಆವರಿಸಿ ರೈತ ಸಮುದಾಯ, ಜನಸಾಮಾನ್ಯರು ಸಂಕಷ್ಟದಲ್ಲಿ ಸಿಲುಕಿದ್ದಾರೆ. ಆದರೆ ರಾಜ್ಯ ಸರ್ಕಾರ ಮಾತ್ರ ಗ್ಯಾರಂಟಿ ಯೋಜನೆಯ ಹೆಸರಲ್ಲಿ ಹಗಲು ದರೋಡೆ ಮಾಡುತ್ತಾ ರಾಜ್ಯವನ್ನು ಆರ್ಥಿಕ ಮುಗ್ಗಟ್ಟಿಗೆ ಸಿಲುಕಿಸಿದೆ. ಬರಗಾಲ ನಿರ್ವಹಣೆ ಮಾಡುವಲ್ಲಿ ಸಂಪೂರ್ಣ ವಿಫಲವಾಗಿದೆ ಎಂದು ಜೆಡಿಎಸ್ ರಾಜ್ಯ ಕಾರ್ಯಾಧ್ಯಕ್ಷ ಹಾಗೂ ಮಾಜಿ ಸಚಿವ ಆಲ್ಕೋಡ್ ಹನಮಂತಪ್ಪ ಆರೋಪಿಸಿದರು.

ಅವರು ಶನಿವಾರ ಜೆಡಿಎಸ್ ಪಕ್ಷದಿಂದ ಬರಗಾಲದ ವಸ್ತುಸ್ಥಿತಿ ಅಧ್ಯಯನಕ್ಕಾಗಿ ಶಿರಹಟ್ಟಿ ಮತಕ್ಷೇತ್ರಕ್ಕೆ ಆಗಮಿಸಿದ ವೇಳೆ ಮಾತನಾಡಿ, ರಾಜ್ಯ ಸರ್ಕಾರ ಕೇವಲ ಗ್ಯಾರಂಟಿಗೆ ಹೆಚ್ಚು ಆದ್ಯತೆ ನೀಡಿದೆ. ಇದಕ್ಕೆ ನಮ್ಮದೇನು ಅಭ್ಯಂತರವಿಲ್ಲ. ಆದರೆ ಗ್ಯಾರಂಟಿ ಯೋಜನೆಗಳೂ ಸಹ ಪೂರ್ಣ ಪ್ರಮಾಣದಲ್ಲಿ ಅನುಷ್ಠಾನವಾಗಿಲ್ಲ. ಸದ್ಯದ ಪರಿಸ್ಥಿತಿಯಲ್ಲಿ ಮುಂಗಾರು-ಹಿಂಗಾರಿನ ಬೆಳೆಗಳೂ ಸಂಪೂರ್ಣ ಕೈಕೊಟ್ಟಿವೆ. ಕೃಷಿಯನ್ನೇ ಅವಲಂಬಿಸಿದ ಜನರ ಪರಿಸ್ಥಿತಿ ಕಷ್ಟದಲ್ಲಿದೆ. ಅಗತ್ಯ ವಸ್ತುಗಳ ಬೆಲೆ ಗಗನಕ್ಕೇರಿವೆ. ಜಾನುವಾರುಗಳಿಗೆ ಮೇವಿಲ್ಲ. ಕೆರೆ, ಹಳ್ಳ, ನದಿ, ನೀರಿಲ್ಲದೇ ಜನ ಮತ್ತು ಜಾನುವಾರುಗಳು ನೀರಿಗಾಗಿ ಪರಿತಪಿಸಬೇಕಾದ ಕೆಟ್ಟ ಪರಿಸ್ಥಿತಿ ಉಂಟಾಗಲಿದೆ.

ಬರ ಪರಿಹಾರಕ್ಕಾಗಿ ರಾಜ್ಯ ಸರಕಾರ ಗದಗ ಜಿಲ್ಲೆಗೆ 10 ಕೋಟಿ ಪರಿಹಾರ ಘೋಷಣೆ ಮಾಡಿದೆ. ಆದರೆ ರೈತರಿಗೂ ಪರಿಹಾರ ಬಂದಿಲ್ಲ. ಬೆಳೆವಿಮೆ, ಬೆಳೆಹಾನಿ ಪರಿಹಾರದ ನಿರೀಕ್ಷೆಯಲ್ಲಿರುವ ▸▸3ನೇ ಪುಟಕ್ಕೆ

---

### ಮತದಾರರ ಪಟ್ಟಿ ಪರಿಷ್ಕರಣೆ ಅಭಿಯಾನಕ್ಕೆ ಸಹಕರಿಸಿ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಜಿಲ್ಲೆಯಾದ್ಯಂತ ಮತದಾರರ ಪಟ್ಟಿಗಳ ವಿಶೇಷ ಪರಿಷ್ಕರಣೆ-2024 ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಅರ್ಹರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಮುದಕಮ್ಮನವರ ಹೇಳಿದರು.

ಅವರು ತಾಲೂಕಿನ ಸೂರಣಗಿ, ದೊಡ್ಡೂರ, ನಾದಿಗಟ್ಟಿ ಸೇರಿ ಪಟ್ಟಣದ ಅನೇಕ ಮತಗಟ್ಟೆಗಳಿಗೆ ಭೇಟಿ ನೀಡಿ, ಮತಪಟ್ಟಿಯಲ್ಲಿ ಅರ್ಹ ಮತದಾರರು ಕೈಬಿಟ್ಟು ಹೋಗದಂತೆ ಮತ್ತು ಹೊಸ ಮತದಾರರ ಸೇರ್ಪಡೆ ಮಾಡಿಕೊಳ್ಳುವಂತೆ ಬಿಎಲ್‌ಓಗಳು ಜವಾಬ್ದಾರಿಯಿಂದ ಕೆಲಸ ನಿರ್ವಹಿಸಬೇಕು. 18 ವರ್ಷ ಮೇಲ್ಪಟ್ಟ ಎಲ್ಲ ಅರ್ಹ ಮತದಾರರು ತಮ್ಮ ಭಾಗದ ಮತಗಟ್ಟೆ ಮಟ್ಟದ ಅಧಿಕಾರಿಗಳ(ಬಿಎಲ್‌ಓ) ಬಳಿ ನಮೂನೆ-6ನ್ನು ಪಡೆದು ಅಗತ್ಯ ದಾಖಲೆಗಳೊಂದಿಗೆ ಮತದಾರರ ಪಟ್ಟಿಯಲ್ಲಿ ಹೆಸರನ್ನು ನೋಂದಾಯಿಸಲು ಸಂಪರ್ಕಿಸಬೇಕು. ಮೃತ ಮತದಾರರು, ಎರಡು ಬಾರಿ ನೋಂದಣಿಯಾದ ಮತದಾರರು ನಮೂನೆ-7ರಲ್ಲಿ ಹಾಗೂ ಮತದಾರರ ಗುರುತಿನ ಚೀಟಿಯಲ್ಲಿ ತಿದ್ದುಪಡಿ, ಸ್ಥಳಾಂತರ ಇದ್ದಲ್ಲಿ ನಮೂನೆ-8ರಲ್ಲಿ ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕು ಎಂದರು.

ಈ ವೇಳೆ ತಹಸೀಲ್ದಾರ ವಾಸುದೇವ ವಿ.ಸ್ವಾಮಿ, ಕಂದಾಯ ನಿರೀಕ್ಷಕ ಬಸವರಾಜ ಕಾತ್ರಾಳ, ಗ್ರಾಮ ಆಡಳಿತ ಅಧಿಕಾರಿ ಬಸವರಾಜ ಮಲ್ಲಿಗವಾಡ ಸೇರಿದಂತೆ ಚುನಾವಣಾ ಶಾಖೆಯ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರು ಇದ್ದರು.

---

### ಮಕ್ಕಳಲ್ಲಿ ಸಾಮಾಜಿಕ ಜವಾಬ್ದಾರಿಯ ಅರಿವು ಮೂಡಿಸಿ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮಕ್ಕಳು ದೇಶದ ಸಂಪತ್ತು ಮತ್ತು ಇಂದಿನ ಮಕ್ಕಳೇ ಇಂದಿನ ಪ್ರಜೆಗಳು. ಅವರಿಗೆ ಶಾಲಾ ಹಂತದಲ್ಲಿಯೇ ಶಿಕ್ಷಣದೊಂದಿಗೆ ನೆಲ, ಜಲ, ಭಾಷೆಯ ಬಗ್ಗೆ ಅಭಿಮಾನ, ಸಾಮಾಜಿಕ ಜವಾಬ್ದಾರಿಯ ಅರಿವು ಮೂಡಿಸಬೇಕಾಗಿದೆ ಎಂದು ಬಿಇಓ ಜಿ.ಎಂ ಮುಂದಿನಮನಿ ಹೇಳಿದರು.

ಪಟ್ಟಣದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ-2ರಲ್ಲಿ ಮಕ್ಕಳ ದಿನಾಚರಣೆ, ಶನಿವಾರ ಸಂಭ್ರಮ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿ, ಮಕ್ಕಳ ಸಮಗ್ರ ಬೆಳವಣಿಗೆಯಲ್ಲಿ ಕೌಶಲಗಳು ಹಾಗೂ ಮೌಲ್ಯಗಳು ನಿರ್ಣಾಯಕ ಪಾತ್ರವನ್ನು ವಹಿಸುತ್ತವೆ. ಇವುಗಳನ್ನು ಶಾಲಾ ಶೈಕ್ಷಣಿಕ ಚಟುವಟಿಕೆಗಳೊಂದಿಗೆ ಮೈಗೂಡಿಸಿಕೊಳ್ಳಲು ಅವಕಾಶ ನೀಡಿದಲ್ಲಿ ಉತ್ತಮ ನಾಗರಿಕರಾಗಲು ಸಹಾಯವಾಗುತ್ತದೆ. ಇದರನ್ವಯ ಮಕ್ಕಳಿಂದಲೇ ಮಕ್ಕಳಿಗಾಗಿ ರೂಪಿಸಿರುವ ಕಾರ್ಯಕ್ರಮ 'ಸಂಭ್ರಮ ಶನಿವಾರ'-ಬ್ಯಾಗ್ ರಹಿತ ದಿನದ ಕಾರ್ಯಕ್ರಮವನ್ನು ಶಾಲೆಗಳಲ್ಲಿ ಆಚರಿಸುವ ಕಾರ್ಯ ಅರ್ಥಪೂರ್ಣ ಎಂದರು.

ಕಾರ್ಯಕ್ರಮದಲ್ಲಿ ಮಕ್ಕಳಿಗೆ ರಾಷ್ಟ್ರ ನಾಯಕರ, ವಿವಿಧ ವೃತ್ತಿಗಳ ವೇಷ-ಭೂಷಣ ಸ್ಪರ್ಧೆ ಏರ್ಪಡಿಸಿ ಪ್ರೋತ್ಸಾಹಿಸಲಾಯಿತು. ಮುಖ್ಯ ಶಿಕ್ಷಕಿ ಎಸ್.ಎಸ್. ಜಿರಂಕಳಿ, ಬಿ.ಎಂ. ಕುಂಬಾರ, ಉಮೇಶ ನೇಕಾರ, ಸತೀಶ ಬೊಮಲೆ ಸೇರಿ ಶಿಕ್ಷಕರು, ಪಾಲಕರು ಇದ್ದರು.

---

### ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ಮಾಹಿತಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಬೆಟಗೇರಿ ಅವಳಿ ನಗರದಲ್ಲಿ ನವೆಂಬರ್ 19 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

**ಸ್ಥಳಗಳ ವಿವರ :** ವಾರ್ಡ್ ನಂ. 29 ರಾಜೀವ ಗಾಂಧಿನಗರ ಪೊಲೀಸ್ ಸ್ಟೇಷನ್ ಕೆಳಗಿನ ಭಾಗ ಸ್ವಿಮ್ಮಿಂಗ್ ಪೂಲ್, ಭಾಂಡಗೆ ಲೈನ್, ಕೊಪ್ಪಳ ಡಾಕ್ಟರ್ ಲೈನ್, ಗುಂಪಿನ ಮನೆ, ಕಲಾಮಂದಿರ ರೋಡ್, ಚಂದಾವರಿ ಸರ್ ಲೈನ, ಹೊಸ ಹುಡ್ಕೋ ಕಾಲೋನಿ, ನೆಲ್ಸನ್ ಮಂಡೆಲಾ ಸ್ಕೂಲ್, ವಾರ್ಡ್ ನಂ 16 ಹೊಂಬಳ ನಾಕಾ ಜನತಾ ಕಾಲೋನಿ, ಮಣ್ಣಮ್ಮನವರ ಲೈನ್, ಅಡ್ಡೆದ ಲೈನ್, ಮಸೂತಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 7 ಪೆಂಡಾರ ಓಣಿ, ಮಲ್ಲೇಶಪ್ಪನ ಲೈನ್, ಅಬ್ಬಿಗೇರಿ ಲೈನ್, ನಂದಗಿರಿ ಲೈನ್, ಗಚ್ಚಿಯವರ ಲೈನ್, ಬಚ್ಚಲಕಮ್ಮನ ಗುಡಿ ಲೈನ್, ಹುಚ್ಚನಗೌಡ್ರ ಓಣಿ, ಚೆನ್ನೇಗೌಡರು ಓಣಿ, ಪಿಂಡಕೋರ ಲೈನ್, ಇಂಡಸ್ಟ್ರಿಯಲ್ ಏರಿಯಾಗಳು. ವಾರ್ಡ್ ನಂ. 6 ಸಿದ್ದಲಿಂಗ ನಗರ, ರೊಟ್ಟಿ ಅವರ ಲೈನ್, ನ್ಯಾವಳ್ಳಿಯವರ ಲೈನ್, ಮಂಜುರವರ ಲೈನ್, ರೆಡ್ಡಿಯವರ ಲೈನ್, ಪಿಪಿ ಗುಡಿ ಹಿಂದಿನ ಭಾಗ, ಭಜಂತ್ರಿ ಓಣಿ, ಅಂಬೇಡ್ಕರ್ ನಗರ, ಹೂಲಿಯವರ ಲೈನ್, ಜನತಾ ಪ್ಲಾಟ್.

ವಾರ್ಡ್ ನಂ. 5 ನೇಕಾರ ಕಾಲೋನಿ ಭಾಗಗಳು. ವಾರ್ಡ್ ನಂ. 21, 22, 23 ಜಂತ್ಲಿಯವರ ಹೊಸ ಲೈನ್, ಹಳೆ ಲೈನ್, ದ್ಯಾಮವ್ವನ ಕಟ್ಟಿ, ಕುಂಬಾರ ಓಣಿ, ಗಂಜಿಬಸವೇಶ್ವರ ಸರ್ಕಲ್, ಕೆರಕಲಿಮಟ್ಟಿ ಲೈನ್, ಕಲಬಂಡಿಯವರ ಲೈನ್, ಹಾಳದಿಬ್ಬ ಪಡಗದ ಭಾಗ-1,2 ಸಿಟಿಹಾಲ್ ಭಾಗ-1, 2 ಕರಿ ದೇವರ ಗುಡಿ. ವಾರ್ಡ್ ನಂ. 2 ಸೆಟ್ಲಮೆಂಟ್ ಗಾಂಧಿನಗರ, ಹನುಮಂತ ದೇವರ ಗುಡಿ ಲೈನ್, ವೆಲ್ಫೇರ್ ತಾಂತ್ರಿಕವಾಗಿ ನೀರು ಪೂರೈಕೆಯಲ್ಲಿ ಒಂದು ವೇಳೆ ಅಡತಡೆಯಾದಲ್ಲಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕೆಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

### ಸಚಿವ ಎಚ್.ಕೆ. ಪಾಟೀಲರಿಗೆ ಅಭಿನಂದನಾ ಸಮಾರಂಭ ಇಂದು



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ನಗರದ ತಿಲಕ ಪಾರ್ಕ್ ಬಳಿ ಹಣ್ಣು, ತರಕಾರಿ, ಹೂ ವ್ಯಾಪಾರ ಮಾಡುತ್ತಿರುವ ಬೀದಿ ವ್ಯಾಪಾರಿಗಳಿಗೆ ಹೈಟೆಕ್ ತಳ್ಳುವ ಗಾಡಿಗಳು ಹಾಗೂ ವೆಜಿಟೇಬಲ್ ಕಾರ್ಟ್‌ಗಳನ್ನು ಆಗಸ್ಟ್ 15ರಂದು ಸಾಂಕೇತವಾಗಿ ಬಿಡುಗಡೆ ಮಾಡಿದ್ದು, 145 ಗಾಡಿಗಳು ನಗರದ ಕೆ.ಎಚ್. ಪಾಟೀಲ ವೃತ್ತದ ಬಳಿ ಇರುವ 2 ಭಾಗದ ಫುಟ್‌ಪಾತ್‌ನಲ್ಲಿ ಸ್ವಾಭಿಮಾನದ ಬದುಕು ಕಟ್ಟಿಕೊಳ್ಳಲು ನ. 19 ಮುಂಜಾನೆ ಸ್ಥಳಾಂತರಗೊಂಡು ಸಂಘಟನೆಯ ವತಿಯಿಂದ 72 ವೆಜಿಟೇಬಲ್ ಕಾರ್ಟ್ಸ್‌ಗಳನ್ನು ಉಚಿತವಾಗಿ ನೀಡಲಾಗುತ್ತಿದೆ.

ಕರ್ನಾಟಕದಲ್ಲಿ ಪ್ರಥಮ ಬಾರಿಗೆ ಬೀದಿ ವ್ಯಾಪಾರಿಗಳಿಗೆ ಗೌರವದಿಂದ ಬದುಕು ಕಟ್ಟಿಕೊಳ್ಳಲು ಗಾಡಿ ನೀಡಿದ್ದು ಶ್ಲಾಘನೀಯ. ಈ ಹಿನ್ನೆಲೆಯಲ್ಲಿ ಭಾನುವಾರ ಬೆಳಿಗ್ಗೆ 11 ಗಂಟೆಗೆ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲರಿಗೆ ಅಭಿನಂದನಾ ಸಮಾರಂಭ ಹಮ್ಮಿಕೊಳ್ಳಲಾಗಿದ್ದು, ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಗಳು, ಪೊಲೀಸ್ ವರಿಷ್ಠಾಧಿಕಾರಿಗಳು, ನಗರಸಭಾ ಅಧ್ಯಕ್ಷರು ಸೇರಿದಂತೆ ಗಣ್ಯರು ಆಗಮಿಸುತ್ತಿದ್ದಾರೆ.

ಸಮಸ್ತ ಬೀದಿ ಬದಿ ವ್ಯಾಪಾರಸ್ಥರು ಈ ಅಭಿನಂದನಾ ಸಮಾರಂಭಕ್ಕೆ ಆಗಮಿಸಿ ಯಶಸ್ವಿಗೊಳಿಸುವಂತೆ ಜಿಲ್ಲಾಧ್ಯಕ್ಷ ಮಕ್ತುಂಬಸಾಬ ನಾಲಬಂದ, ಹಿರಿಯ ಮುಖಂಡರಾದ ಮಾರುತಿ ಸೋಳಂಕಿ, ಶಿವಾಜಿ ಮಧುರಕರ, ರಶೀದಾ ನದಾಫ, ರೇಣುಕಾ ಹತ್ತಿವಾಲೆ, ಫಯಾಜ ನಾರಾಯಣಗೇರಿ, ಜಹಾಂಗೀರ ಮುಳಗುಂದ, ಕುತ್ರಜಾ ದೊಡ್ಡಮನಿ, ಅಬ್ದುಲ್ ರೆಹಮಾನ ಹುಯಿಲಗೋಳ ಸೇರಿದಂತೆ ಸಂಘದ ಎಲ್ಲಾ ಪದಾಧಿಕಾರಿಗಳು ವಿನಂತಿಸಿದ್ದಾರೆ ಎಂದು ಭಾಷಾಸಾಬ ಮಲ್ಲಸಮುದ್ರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾಕ್ಷಿ ಸುಭಾಷಿತ

ಶಾಂತಿಗೆ ಸಮನಾದ ತಪಸ್ಸಿಲ್ಲ,
ಸಂತೋಷಕ್ಕಿಂತ ಹೆಚ್ಚಿನ ಸುಖವಿಲ್ಲ
–ಸುಭಾಷಿತ

## ಸಂಪಾದಕೀಯ

### ಬಿಜೆಪಿಗೂ ಬಂತು ಕಾಂಗ್ರೆಸ್ಸಿನ ಹೈ ಕಮಾಂಡ್ ಸಂಸ್ಕೃತಿ- ಸಂಸ್ಕಾರ

ರಾಜ್ಯ ಬಿಜೆಪಿ ಅಧ್ಯಕ್ಷರಾಗಿ ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ಅವರ ಪುತ್ರ ಹಾಗೂ ಶಿಕಾರಿಪುರದ ಶಾಸಕ ಬಿ.ವೈ. ವಿಜಯೇಂದ್ರ ಹಾಗೂ ವಿಧಾನಸಭೆ ಪ್ರತಿಪಕ್ಷದ ನಾಯಕರಾಗಿ ಶಾಸಕ ಆರ್ ಅಶೋಕ್ ನೇಮಕವಾಗಿದ್ದಾರೆ.

ವಿಜಯೇಂದ್ರ ಅವರು ರಾಜ್ಯಾಧ್ಯಕ್ಷರಾಗಿ ಘೋಷಣೆಯಾಗುತ್ತಿದ್ದಂತೆ ಪ್ರತಿಪಕ್ಷದ ನಾಯಕರಾಗಿ ಪ್ರಬಲ ಒಕ್ಕಲಿಗ ಸಮುದಾಯದ ನಾಯಕರು ಒಬ್ಬರಿಗೆ ಮಣೆ ಹಾಕಲಾಗುತ್ತದೆ ಎನ್ನುವ ಲೆಕ್ಕಾಚಾರ ಸರಿಯಾಗಿದೆ. ಈ ಕುರಿತು ವಿಜಯಸಾಕ್ಷಿ ಪತ್ರಿಕೆಯೂ ಸಂಪಾದಕೀಯದಲ್ಲಿ ಬೆಳಕು ಚೆಲ್ಲುವ ಪ್ರಯತ್ನ ಮಾಡಿತ್ತು. ಸದ್ಯ ವಿಷಯ, ರಾಜ್ಯಾಧ್ಯಕ್ಷರು ಮತ್ತು ವಿಧಾನಸಭೆಯ ಪ್ರತಿಪಕ್ಷ ನಾಯಕರಿಗೆ ಆಯ್ಕೆಗಿಂತ ಹೆಚ್ಚಾಗಿ ಬಿಜೆಪಿಯ ಸಂಸ್ಕೃತಿ ಮತ್ತು ಸಂಸ್ಕಾರದ ಬಗ್ಗೆ ಗಮನಹರಿಸಬೇಕಿದೆ.

ಬಿಜೆಪಿ ವಿಶ್ವದಲ್ಲಿ ಅತಿ ದೊಡ್ಡ ರಾಜಕೀಯ ಪಕ್ಷ ಎನ್ನುವ ಹೆಗ್ಗಳಿಕೆ ಹೊಂದಿದೆ. ಅದಕ್ಕಿಂತ ಮುಖ್ಯವಾಗಿ ಕಾಂಗ್ರೆಸ್‌ನಂತೆ ಬಿಜೆಪಿ ಹೈಕಮಾಂಡ್ ಆಧಾರಿತ ಪಕ್ಷವಲ್ಲ, ಕಾರ್ಯಕರ್ತರ ಆಧಾರಿತ ಪಕ್ಷ ಎಂದು ಹೇಳಿಕೊಳ್ಳುತ್ತದೆ. ಕಾರ್ಯಕರ್ತರೆ ಪಕ್ಷದ ಜೀವಾಳ ಎಂದು ರಾಷ್ಟ್ರೀಯ ನಾಯಕರು ಹೇಳಿಕೊಳ್ಳುತ್ತಾರೆ. ಸದ್ಯ ಬಿಜೆಪಿ ರಾಜ್ಯಾಧ್ಯಕ್ಷರ ಆಯ್ಕೆ ನೋಡಿದರೆ ಬಿಜೆಪಿಯಲ್ಲಿ ಕಾಂಗ್ರೆಸ್‌ನಂತೆ ಹೈಕಮಾಂಡ್ ಸಂಸ್ಕೃತಿ ಅಳವಡಿಸಿಕೊಂಡಂತೆ ಕಾಣುತ್ತಿದೆ. ಅದಕ್ಕೆ ಅನೇಕ ಕಾರಣಗಳಿವೆ. ಮುಖ್ಯವಾಗಿ ರಾಜ್ಯಾಧ್ಯಕ್ಷರ ಆಯ್ಕೆಗೂ ಮುನ್ನ ಬೂತ್ ಮಟ್ಟದ ಅಧ್ಯಕ್ಷರ ಆಯ್ಕೆ ನಡೆಯಬೇಕು. ನಂತರ ಮಂಡಲ ಅಧ್ಯಕ್ಷರ ಆಯ್ಕೆಯಾಗಬೇಕು. ಮಂಡಲ ಅಧ್ಯಕ್ಷರು ಜಿಲ್ಲಾಧ್ಯಕ್ಷರನ್ನು ಆಯ್ಕೆ ಮಾಡಬೇಕು. ಜಿಲ್ಲಾಧ್ಯಕ್ಷರು ರಾಜ್ಯಾಧ್ಯಕ್ಷರ ಆಯ್ಕೆ ಮಾಡಬೇಕು.

ಆದರೆ ಈ ನಿಮಯವನ್ನು ಗಾಳಿಗೆ ತೂರಿ ವಿಜಯೇಂದ್ರ ಅವರ ನೇಮಕವಾಗಿದೆ. ಹೈ ಕಮಾಂಡ್ ಆದೇಶದಂತೆ ವಿಜಯೇಂದ್ರ ನೇಮಕವಾಗಿದೆ. ಈ ಆಯ್ಕೆಯನ್ನು ನೋಡಿದರೆ ಬಿಜೆಪಿಗೂ ಕಾಂಗ್ರೆಸ್ ಸಂಸ್ಕೃತಿ ಬಂದಿರುವುದು ಸ್ಪಷ್ಟವಾಗುತ್ತದೆ. ಕಾರ್ಯಕರ್ತರ ಅಭಿಪ್ರಾಯವನ್ನು ಪರಿಗಣಿಸದೆ ಇವತ್ತು ಬಿಜೆಪಿ ರಾಜ್ಯಾಧ್ಯಕ್ಷರ ಆಯ್ಕೆಯಾಗಿದೆ. ಸಹಜವಾಗಿ ಅಸಮಾಧಾನ ಭುಗಿಲೆದ್ದಿದೆ. ಜೊತೆಗೆ ಆರ್. ಅಶೋಕ ನೇಮಕ ಉರಿಯುವ ಬೆಂಕಿಗೆ ತುಪ್ಪ ಸುರಿದಂತಾಗಿದೆ. ಬೆಂಕಿ ಹೇಗೆ ವ್ಯಾಪಿಸುತ್ತದೆ ಎನ್ನುವುದನ್ನು ನೋಡಬೇಕಿದೆ.

## ಇಡೀ ದೇಶವೇ ತುದಿಗಾಲಲ್ಲಿ ನಿಂತು ಕಾಯುತ್ತಿರುವ ಕ್ರಿಕೆಟ್ ವಿಶ್ವಕಪ್ ಕಾದಾಟ

# 'ವಿಶ್ವಕಪ್' ಫೈನಲ್‌ನಲ್ಲಿ ಗೆದ್ದು ಬಾ ಇಂಡಿಯಾ

ಕ್ರಿಕೆಟ್ ಆಟ ಟಿವಿಯಲ್ಲಿ ಬರುತ್ತಿದ್ದರೆ ಚಿಕ್ಕ ಮಕ್ಕಳು ಕೂಡ ತದೇಕ ಚಿತ್ತದಿಂದ ಕ್ರಿಕೆಟ್ ವೀಕ್ಷಣೆ ಮಾಡುತ್ತಾರೆ. ಮಕ್ಕಳು ಬೆಳೆದಂತೆ ಹೆಚ್ಚಾಗಿ ಇಷ್ಟಪಡುವ ಆಟ ಕ್ರಿಕೆಟ್. ಅದು ಶಾಲೆಯ ಆಟದ ಮೈದಾನದಲ್ಲಿ ಇರಬಹುದು, ಮನೆಯ ಸುತ್ತಮುತ್ತ ಇರುವ ಮೈದಾನ ಪ್ರದೇಶಗಳಲ್ಲಿ ಇರಬಹುದು, ಅಲ್ಲಿಂದಲೇ ಅವರಿಗೆ ಕ್ರಿಕೆಟ್ ಆಸಕ್ತಿ ಮೊಳಕೆಯೊಡೆಯುತ್ತದೆ.

ವಿಶ್ವ ಮಟ್ಟದಲ್ಲಿ ಕ್ರಿಕೆಟ್‌ಗೆ ಮನ್ನಣೆ ಇದೆ. ಕ್ರಿಕೆಟ್ ಆಡದ ದೇಶಗಳಿದ್ದರೂ ಕೂಡ, ಕ್ರಿಕೆಟ್ ಆಡುವ ದೇಶಗಳಿಗಿಂತ ಭಾರತದಲ್ಲಿ ಹೆಚ್ಚು ಪ್ರೇಕ್ಷಕರು ಹೊಂದಿದ್ದಾರೆ. ಏಕೆಂದರೆ ಒಂದು ತಂಡ ಲೀಗ್ ಹಂತದಿಂದ ಕೊನೆಯವರೆಗೂ ಕೂಡ ಯಶಸ್ವಿಯಾಗಿ ಆಡಬೇಕೆನ್ನುವ ಛಲ ಪ್ರತಿಯೊಬ್ಬ ಆಟಗಾರರಿಗೂ ಕೂಡ ಇದ್ದೇ ಇರುತ್ತದೆ.

ಈ ಬಾರಿಯ ವಿಶ್ವಕಪ್ ಅನೇಕ ಅನಿರೀಕ್ಷಿತ ಫಲಿತಾಂಶಗಳನ್ನು ಕೂಡ ನೀಡಿದೆ. ದುರ್ಬಲ ತಂಡಗಳೂ ಪ್ರಬಲ ತಂಡವನ್ನು ಸೋಲಿಸಿ ತಮ್ಮ ಹೋರಾಟ ಪ್ರದರ್ಶನ ಮಾಡಿವೆ. ಅದರಲ್ಲೂ ಈ ಬಾರಿಯ ವಿಶ್ವಕಪ್‌ನಲ್ಲಿ ಭಾರತದ ಸಾಧನೆ ನಿಜಕ್ಕೂ ಅಚ್ಚಳಿಯದೆ ಉಳಿಯುತ್ತದೆ. ಏಕೆಂದರೆ ತಾನು ಆಡಿದ ಎಲ್ಲಾ ಪಂದ್ಯಗಳಲ್ಲೂ ಕೂಡ ಜಯಭೇರಿ ಬಾರಿಸಿ, ಸೋಲಿಲ್ಲದ ಸರದಾರರಾಗಿ ಫೈನಲ್ ಪ್ರವೇಶ ಮಾಡಿದ್ದು, ಇದೇ ಭಾನುವಾರ ಮತ್ತೊಂದು ಪ್ರಬಲ ತಂಡ ಆಸ್ಟ್ರೇಲಿಯ ವಿರುದ್ಧ ಸೆಣಸಲು ತಯಾರಾಗಿದೆ.

ಭಾರತದಲ್ಲಿ ಈಗಾಗಲೇ ಅಭಿಮಾನಿ ಪ್ರೇಕ್ಷಕರು ತಮ್ಮ ತಮ್ಮ ದೇವರುಗಳಿಗೆ, ಭಾರತ ಈ ಬಾರಿ ವಿಶ್ವಕಪ್ ಗೆಲ್ಲಲ್ಲೇಬೇಕು ಎನ್ನುವ ಒಂದೇ ಒಂದು ಆಸೆಯಿಂದ ಮನಃಪೂರ್ವಕವಾಗಿ ನಮಿಸುತ್ತಿದ್ದಾರೆ. ಜೊತೆಗೆ ಸೋಲು-ಗೆಲುವಿನ ಲೆಕ್ಕಾಚಾರ ಕೂಡ ಈ ವಿಶ್ವಕಪ್ ಕ್ರಿಕೆಟ್ ಹಬ್ಬದಲ್ಲಿ ನಡೆಯುತ್ತಿದೆ.




ಅಹ್ಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣ ಒಂದು ರೋಚಕ ಫಲಿತಾಂಶಕ್ಕಾಗಿ ಸಜ್ಜಾಗಿದೆ. ಲೀಗ್ ಹಂತದಲ್ಲಿ ಆಡಲಾದ ಎಲ್ಲಾ 9 ಪಂದ್ಯಗಳಲ್ಲೂ ಕೂಡ ಭರ್ಜರಿ ಜಯ ಗಳಿಸಿರುವ ಭಾರತ ಸೆಮಿ ಫೈನಲ್ ಪಂದ್ಯದಲ್ಲೂ ಕೂಡ ಜಯ ಸಾಧಿಸಿ ಸತತ 10ನೇ ಗೆಲುವಿನೊಂದಿಗೆ ಪ್ರಶಸ್ತಿಯ ಸುತ್ತಿನ ಪಂದ್ಯದಲ್ಲಿ ಆಡಲು ಸಜ್ಜಾಗಿದೆ. ತನ್ಮೂಲಕ 20 ವರ್ಷಗಳ ನಂತರ ಮತ್ತೆ ಭಾರತ-ಆಸ್ಟ್ರೇಲಿಯಾ ತಂಡಗಳು ವಿಶ್ವಕಪ್ ಫೈನಲ್‌ನಲ್ಲಿ ಮುಖಾಮುಖಿಯಾಗಿವೆ.

ಭಾರತದ ಸಾಧನೆಯ ಅಂಕಿ-ಅಂಶಗಳನ್ನು ಗಮನಿಸಿದರೆ ಈ ಬಾರಿ ಭಾರತ ಮೊದಲು ಬ್ಯಾಟ್ ಮಾಡಿ ನಂತರ ಬೌಲಿಂಗ್ ಮಾಡಿ ಕೂಡ ಗೆದ್ದಿದ್ದಾರೆ. ಅದೇ ರೀತಿ ಮೊದಲು ಬೌಲಿಂಗ್ ಮಾಡಿ ನಂತರ ಬ್ಯಾಟಿಂಗ್ ಮಾಡುವ ಮೂಲಕ (ಚೇಸಿಂಗ್) ಗೆದ್ದಿದ್ದಾರೆ. ಜೊತೆಗೆ ಕ್ಷೇತ್ರ ರಕ್ಷಣೆಯಲ್ಲೂ ಕೂಡ ಪಳಗಿದ್ದಾರೆ. ಇದರೊಂದಿಗೆ ನಮ್ಮ ಭಾರತ ಮೂರನೇ ಬಾರಿಗೆ ವಿಶ್ವಕಪ್ ಪಡೆಯುವ ಎಲ್ಲಾ ಅರ್ಹತೆ ಹೊಂದಿದೆ.

ಈಗ ಅಂತಿಮವಾಗಿ ಭಾರತ ವಿಶ್ವಕಪ್‌ನತ್ತ ಗುರಿ ಇಟ್ಟಿದೆ. ಜೊತೆಗೆ ವಿಶ್ವಕಪ್ ಟೂರ್ನಿಯ ಎಲ್ಲಾ 10 ಪಂದ್ಯಗಳಲ್ಲಿ ಗೆಲುವು ಸಾಧಿಸಿದ್ದ ಆಸ್ಟ್ರೇಲಿಯಾ ದಾಖಲೆಯನ್ನು ಭಾರತ ಸರಿಗಟ್ಟಿದಂತಾಗಿದೆ. ಹೀಗೆ ಭಾರತ ಕಳೆದ ಹತ್ತು ವರ್ಷಗಳಿಂದ ಏಕದಿನ ಮತ್ತು ಟೆಸ್ಟ್ ಕ್ರಿಕೆಟ್‌ನಲ್ಲಿ ಸಾರ್ವಭೌಮತ್ವ ಸಾಧಿಸಿ ಈ ಬಾರಿಯ ವಿಶ್ವಕಪ್‌ನಲ್ಲಿ ಯಶಸ್ಸು ಸಾಧಿಸಿದೆ. ಸೋಲಿಲ್ಲದ ಭಾರತದ ಕ್ರಿಕೆಟ್ ಕಲಿಗಳಿಗೆ ಒಂದೇ ಒಂದು ಮೆಟ್ಟಿಲು ಬಾಕಿ ಇದೆ. ಅದನ್ನು ಯಶಸ್ವಿಯಾಗಿ ನೆರವೇರಿಸುತ್ತದೆ ಎನ್ನುವುದು ಭಾರತೀಯರೆಲ್ಲರ ಆಶಯ.

ಯಾವುದೇ ಕ್ರೀಡೆಯಾದರೂ ದೇಶ-ದೇಶಗಳ ನಡುವೆ ಸೌಹಾರ್ದಯುತ ಭಾವನೆಯನ್ನು ತಂದುಕೊಡುತ್ತವೆ. ಯಾವುದೇ ಆಟ ಎಂದ ಮೇಲೆ ಸೋಲು-ಗೆಲುವು ಇದ್ದುದ್ದೆ. ಆದರೆ ನಿರಂತರ ಸೋಲುಗಳಿಂದ ಪಾಠ ಕಲಿಯಬೇಕು ಅಷ್ಟೇ. ಪರಿಶ್ರಮ, ನಿರಂತರ ಅಭ್ಯಾಸ ಇದ್ದಲ್ಲಿ ಯಾವುದೇ ಕ್ರೀಡೆಗಳಲ್ಲಿ ನಮ್ಮ ದೇಶ ಮುಂದೆ ಬರುತ್ತದೆ. ಈ ನಿಟ್ಟಿನಲ್ಲಿ ಹಲವು ಕ್ರೀಡೆಗಳಲ್ಲಿ ನಮ್ಮ ಭಾರತ ಸಾಧನೆ ಮಾಡಿದೆ.

ಮತ್ತೊಮ್ಮೆ ಈ ಬಾರಿಯ ವಿಶ್ವಕಪ್ ಫೈನಲ್‌ನಲ್ಲಿ ಭಾರತ 'ವಿಶ್ವಕಪ್' ಎತ್ತಿ ಹಿಡಿಯಲಿ ಎಂದು ಆಶಿಸುತ್ತೇನೆ. ನಮ್ಮ ಭಾರತ ಕ್ರಿಕೆಟ್ ಕಲಿಗಳಿಗೆ ಶುಭಕಾಮನೆಗಳು.

**–ಕಾಳಿಹುಂಡಿ ಶಿವಕುಮಾರ್,**
ಮೈಸೂರು.

## ಭಾರತ-ಆಸ್ಟ್ರೇಲಿಯಾ ಕ್ರಿಕೆಟ್ ಪಂದ್ಯಾವಳಿ: ಕ್ರೀಡಾಭಿಮಾನಿಗಳಿಂದ ವಿಶೇಷ ಪೂಜೆ

■ **ವಿಜಯಸಾಕ್ಷಿ ಸುದ್ದಿ, ಹಾವೇರಿ**

ಭಾರತ ಮತ್ತು ಆಸ್ಟ್ರೇಲಿಯಾ ನಡುವೆ ನಾಳೆ ನಡೆಯಲಿರೋ ವರ್ಲ್ಡ್ ಕಪ್ ಪಂದ್ಯಾವಳಿಗೆ ಹಾವೇರಿಯಲ್ಲಿ ಕ್ರೀಡಾಭಿಮಾನಿಗಳು ತೇರು ಬೀದಿ ಆಂಜನೇಯ ಸ್ವಾಮೀಗೆ ಪೂಜೆ ಸಲ್ಲಿಸಿದರು. ನಗರದ ಆಂಜನೇಯ ಸ್ವಾಮೀಗೆ ಪೂಜೆ ಸಲ್ಲಿಸಿ, ಭಾರತ ಗೆಲ್ಲುವಂತೆ ಪ್ರಾರ್ಥನೆ ಸಲ್ಲಿಸಿದರು. ಭಾರತ ಪರ ಘೋಷಣೆ ಕೂಗಿ,ಜೈಕಾರ ಹಾಕಿದ್ದಾರೆ. ಜೊತೆಗೆ ವಿರಾಟ್ ಕೋಹ್ಲಿಯ ಅಭಿಮಾನಿ ಪ್ರವೀಣ ಬೆನ್ನಿನ ಹಿಂಭಾಗದಲ್ಲಿ ಹಚ್ಚೆ ಹಾಕಿಕೊಂಡಿದ್ದಾರೆ.




ಗದಗ ವಿಜಯ ಕಲಾಮಂದಿರ ಸಂಸ್ಥೆಯು ಶ್ರೀ ರಮೇಶ ಟಿ. ಅಕ್ಕಿಯವರ ಜನ್ಮದಿನೋತ್ಸವದ ಅಂಗವಾಗಿ ಹಮ್ಮಿಕೊಂಡ ಪ್ರೌಢಶಾಲಾ ವಿದ್ಯಾರ್ಥಿಗಳ ಜಿಲ್ಲಾ ಮಟ್ಟದ ಚಿತ್ರಕಲಾ ಸ್ಪರ್ಧೆಯಲ್ಲಿ ವಿಜೇತರಾದ ಅದಿತಿ ಖಟವಟೆ, ವಿನಯ್ ಚಿಕ್ಕಟ್ಟಿ ಪ್ರೌಢಶಾಲೆ ಗದಗ, ಅನೂಕಿ ಪಿ. ಬಾಕಳೆ ಲೋಯಲಾ ಪ್ರೌಢಶಾಲೆ ಗದಗ, ವಿಕಾಸ್ ಎಂ. ಗುಡಿಮನಿ ಮುರಾರ್ಜಿ ದೇಸಾಯಿ ವಸತಿ ಶಾಲೆ ಒಡೆಯರ್ ಮಲ್ಲಾಪುರ, ಅಂಜಲಿ ಎಸ್. ಹಡಪದ ಶಾಸ್ತ್ರಿ ಪ್ರೌಢಶಾಲೆ ಗದಗ, ಪಲ್ಲವಿ ಬಿ. ಹಡಪದ ಕರ್ನಾಟಕ ಪಬ್ಲಿಕ್ ಸ್ಕೂಲ್ ಸೊರಟೂರ ಇವರಿಗೆ ಬೆಳ್ಳಿಪದಕ ಪ್ರಶಸ್ತಿ, ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಯಿತು.

**ಹುಯಿಲಗೋಳದಲ್ಲಿ ನಡೆಯುವ ಗುರುವಂದನೆ ನಿಮಿತ್ತ ಕವನ**

## ಗುರುವಿನ ಆಶೀರ್ವಾದಗಳು

ನಾನೆಂದೂ ಕಾಣದಂತ ಈ ಕ್ಷಣ
ಮನಸ್ಸು ಹೃದಯ ತುಂಬಿಬಂದ
ಅಪಾರವಾದ ಆನಂದದ ಈ ಕ್ಷಣ
ಎಂತಹ ಅದ್ಭುತವಾದ ಈ ಕ್ಷಣ ॥1॥



ಬಾಲ್ಯದಲ್ಲಿ ಕುಣಿದು ಕುಪ್ಪಳಿಸಿದ
ಆಟ-ಪಾಠಗಳಲ್ಲಿ ಶ್ರಮಜೀವಿಗಳೇ
ಜೀವನಂಗಳದಲ್ಲಿ ನಗುನಗುತಲಿರುವ
ಹೆಮ್ಮೆಯ, ಧೈರ್ಯದ ಜೀವನ ನಡೆಸುವ
ಎಲ್ಲ ಶಿಷ್ಯಂದಿರರಿಗೆ ಆಶೀರ್ವಾದಗಳು ॥2॥

ಎಲ್ಲ ಗುರುಗಳಿಗೆ, ಗುರುಮಾತೆಯರಿಗೆ
ಹೊಸ ಉಡುಗರೆಯೊಂದನ್ನು ನೀಡಿ
ಹೂ-ಪುಷ್ಪಗಳೊಂದಿಗೆ ಅದ್ದೂರಿಯ
ಈ ಸನ್ಮಾನ ಮಾಡಿದ ಎಲ್ಲ
ಶಿಷ್ಯವೃಂದಕ್ಕೆ ಆಶೀರ್ವಾದಗಳು ॥3॥

ನಿಮ್ಮ ಬಾಲ್ಯದ ಸವಿನೆನಪುಗಳನ್ನು
ಪುನರ್ ಮಿಲನದ ಮೂಲಕ ಸವಿನೆನಪಿನೊಂದಿಗೆ
ಇಂದು ಇಲ್ಲಿ ಸೇರಿರುವ ಎಲ್ಲ
ಶಿಷ್ಯ ವೃಂದಕ್ಕೆ ಆಶೀರ್ವಾದಗಳು ॥4॥

ಯರೂ ಕೊಡದ, ಎಂದೂ ಸಿಗದ
ಎಂದೂ ಮರೆಯದ ಎಂತಹ ಈ ಕ್ಷಣ
ಅದ್ಭುತವಾದ ಈ ಸನ್ಮಾನ ಮಾಡಿದ
ಶಿಷ್ಯ ವೃಂದಕ್ಕೆ ಹೃದಯ ತುಂಬಿ ಹರಸುವೆನು
ವಿಘ್ನೇಶ್ವರನು, ಸರಸ್ವತಿಯು ಎಲ್ಲ ಶಿಷ್ಯವೃಂದಕ್ಕೆ
ಒಳಿತು ಮಾಡಲೆಂದು ಹರಸುವೆನು, ಆಶೀರ್ವದಿಸುವೆನು ॥5॥

**– ಬಿ.ಟಿ. ಚುಂಚಾ.**
ನಿವೃತ್ತ ಮುಖ್ಯೋಪಾಧ್ಯಾಯರು, ಗದಗ.

## ಅರುಣೋದಯ ವಿಶೇಷ ಅಗತ್ಯವುಳ್ಳ ಮಕ್ಕಳ ಶಾಲೆಯಲ್ಲಿ ಮಕ್ಕಳ ದಿನಾಚರಣೆ



■ **ವಿಜಯಸಾಕ್ಷಿ ಸುದ್ದಿ, ಗದಗ**

ಗದುಗಿನ ಸೇವಾ ಭಾರತಿ ಟ್ರಸ್ಟ್‌ನ ಅರುಣೋದಯ ವಿಶೇಷ ಅಗತ್ಯವುಳ್ಳ ಮಕ್ಕಳ ಶಾಲೆಯಲ್ಲಿ ಮಕ್ಕಳ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಮಕ್ಕಳ ಪಾಲಕ-ಪೋಷಕರು ಮಕ್ಕಳೊಂದಿಗೆ ಕಾರ್ಯಕ್ರಮದಲ್ಲಿ ಸಂಭ್ರಮಿಸಿದರು. ಔಪಚಾರಿಕವಾಗಿ ನಡೆದ ಕಾರ್ಯಕ್ರಮದಲ್ಲಿ ಮಕ್ಕಳನ್ನು ಉದ್ದೇಶಿಸಿ ಮಾತನಾಡಿದ ಶಾಲಾ ಆಡಳಿತ ಮಂಡಳಿಯ ಕಾರ್ಯದರ್ಶಿ ಜಯರಾಜ ಮುಳಗುಂದ, ಪಂ. ಜವಾಹರಲಾಲ ನೆಹರೂ ಅವರ ಜನ್ಮದಿನವಾದ ನವೆಂಬರ್ 14ನ್ನು ದೇಶದಾದ್ಯಂತ ಮಕ್ಕಳ ದಿನಾಚರಣೆಯನ್ನಾಗಿ ಆಚರಿಸಿಕೊಂಡು ಬಂದಿದ್ದೇವೆ. ಈ ಮುದ್ದು ಮಕ್ಕಳ ವೇಷ-ಭೂಷಣ ನೋಡಿ ತುಂಬಾ ಸಂತೋಷವಾಯಿತು. ಮಕ್ಕಳಲ್ಲಿ ಸಾಕ್ಷಾತ್ ಆ ಮಹನೀಯರನ್ನೇ ನೋಡಿದಂತಾಯಿತು ಎಂದು ಹರ್ಷ ವ್ಯಕ್ತಪಡಿಸಿದರು. ಶಾಲಾ ಆಡಳಿತ ಮಂಡಳಿಯ ಉಪಾಧ್ಯಕ್ಷ ಲುಕ್ಕಣಸಾ ರಾಜೋಳಿ ಮಾತನಾಡಿ, ಶಾಲೆಯಲ್ಲಿ ಪ್ರತಿ ಕಾರ್ಯಕ್ರಮವನ್ನೂ ಅರ್ಥಪೂರ್ಣವಾಗಿ ಆಚರಿಸುತ್ತ ಬಂದಿದ್ದೇವೆ. ಈ ಮಕ್ಕಳ ದಿನಾಚರಣೆಯಂದು ಮಕ್ಕಳ ವೇಷಭೂಷಣ, ಪಾಲಕರ ಸಂತೋಷ ನೋಡಿ ಇನ್ನೂ ಹೆಚ್ಚು ಕಾರ್ಯಕ್ರಮಗಳನ್ನು ಮಾಡಲು ಪ್ರೇರೆಪಿಸುತ್ತದೆ ಎಂದರು.

ಕಾರ್ಯಕ್ರಮಕ್ಕೆ ಆಗಮಿಸಿದ್ದ ರಾಜೇಂದ್ರ ಖಟವಟೆ ಅವರು ಶಾಲೆಗೆ ಅಕ್ಕಿಯನ್ನು ದೇಣಿಗೆಯಾಗಿ ನೀಡಿದರು. ಕಾರ್ಯಕ್ರಮದಲ್ಲಿ ಶಾಲಾ ಆಡಳಿತ ಮಂಡಳಿಯ ಕೋಶಾಧ್ಯಕ್ಷ ಜಿತೇಂದ್ರ ಶಹಾ, ಮುಖ್ಯೋಪಾಧ್ಯಾಯ ಮಲ್ಲಪ್ಪ ಹಕ್ಕಿ, ಶಿಕ್ಷಕರಾದ ಜಗದೀಶ ಹಡಪದ, ಜಯಶ್ರೀ ಭಾವರೆ, ರೇಣುಕಾ ದಾಸರ, ವೀಣಾ ಕೊಲ್ಲಾಪುರೆ, ಮಲ್ಲಿಕಾರ್ಜುನ ನಾಗಲಾಪೂರ ಹಾಗೂ ಪಾಲಕರು ಭಾಗವಹಿಸಿದ್ದರು.

## ಸ್ಪೀಕರ್ ಸ್ಥಾನವನ್ನು ರಾಜಕೀಯ, ಜಾತಿ ಧರ್ಮದಿಂದ ನೋಡುವಂತಿಲ್ಲ: ಯು.ಟಿ ಖಾದರ್

■ **ವಿಜಯಸಾಕ್ಷಿ ಸುದ್ದಿ, ಮಂಗಳೂರು:**

ನಾನು ಎಲ್ಲರ ಸ್ಪೀಕರ್. ಸ್ಪೀಕರ್ ಸ್ಥಾನವನ್ನು ರಾಜಕೀಯ, ಜಾತಿ ಧರ್ಮದಿಂದ ನೋಡುವಂತಿಲ್ಲ ಎಂದು ಹೇಳುವ ಮೂಲಕ ಸಚಿವ ಜಮೀರ್ ಅಹ್ಮದ್ ಹೇಳಿಕೆಗೆ ಸ್ಪೀಕರ್ ಯು.ಟಿ ಖಾದರ್ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಸ್ಪೀಕರ್ ಸ್ಥಾನದ ಬಗ್ಗೆ ಜಮೀರ್ ವಿವಾದಾತ್ಮಕ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಎಲ್ಲವನ್ನು ಕೂಡ ಮೆಟ್ಟಿ ನಿಂತು ನೋಡಬೇಕಾದ ಸಂವಿಧಾನ ಬದ್ಧವಾದ ಸ್ಥಾನ ಇದಾಗಿದೆ. ನನಗೆ ಗೌರವ ಕೊಡುವುದು ಯು.ಟಿ ಖಾದರ್ ಗೆ ಗೌರವ ಕೊಡೋದು ಅಲ್ಲ. ಸಂವಿಧಾನ ಪೀಠಕ್ಕೆ ಮತ್ತು ಸಭಾಧ್ಯಕ್ಷ ಸ್ಥಾನಕ್ಕೆ ಹಾಗೂ ಅಲ್ಲಿ ಕೂರುವ ನಾವು ಗೌರವ ಉಳಿಸುವ ಕೆಲಸ ಮಾಡಬೇಕು ಎಂದರು.




ನಾನು ಯಾರ ಹೇಳಿಕೆಗೂ ಕಮೆಂಟ್ ಮಾಡೋದಿಲ್ಲ. ನನ್ನನ್ನು ಜಾತಿ, ಧರ್ಮದ ಆಧಾರದಲ್ಲಿ ಯಾರು ಸಹ ಆ ಪೀಠದಲ್ಲಿ ಕೂರಿಸಿಲ್ಲ. ಅರ್ಹತೆಗೆ ಅನುಗುಣವಾಗಿ ಸಂವಿಧಾನ ಬದ್ಧವಾಗಿ ಕೆಲಸ ನಿರ್ವಹಿಸುವ ವಿಶ್ವಾಸದಿಂದ ಕೂರಿಸಿದ್ದಾರೆ. ಸಂವಿಧಾನಕ್ಕೆ ಅನುಗುಣವಾಗಿ ಕೆಲಸ ಮಾಡುತ್ತೇನೆ. ನಾನು ಎಲ್ಲರಿಗೂ ಗೌರವ ಕೊಟ್ಟು ಗೌರವ ಪಡೆಯುತ್ತೇನೆ. ಎಲ್ಲರ ಸ್ಪೀಕರ್ ಆಗಿ ಕೆಲಸ ನಿರ್ವಹಿಸುತ್ತೇನೆ. ಸ್ಪೀಕರ್ ಸ್ಥಾನವನ್ನು ಜಾತಿ ಧರ್ಮ ಬಿಟ್ಟು ನೋಡಬೇಕು ಎಂದು ಹೇಳಿದರು.

## ಮಾಜಿ ಸಿಎಂ ಕುಮಾರಸ್ವಾಮಿ ತಮ್ಮ ಘನತೆಗೆ ತಕ್ಕಂತೆ ವರ್ತಿಸಲಿ: ಡಿ.ಕೆ. ಶಿವಕುಮಾರ್

■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

"ಕುಮಾರಸ್ವಾಮಿ ಅವರು ಮಾಜಿ ಮುಖ್ಯಮಂತ್ರಿಗಳು. ಅವರಿಗೊಂದು ಘನತೆ ಇದೆ. ಅದಕ್ಕೆ ತಕ್ಕಂತೆ ವರ್ತಿಸಬೇಕು ಎಂದು ನಾನು ನಿರೀಕ್ಷಿಸುತ್ತೇನೆ. ದಿನಬೆಳಗಾದರೆ ಸುಳ್ಳು ಆರೋಪ ಮಾಡುವುದು ಅವರ ಘನತೆಗೆ ಸರಿಯಲ್ಲ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

ಸದಾಶಿವನಗರ ನಿವಾಸದ ಬಳಿ ಮಾಧ್ಯಮಗಳಿಗೆ ಅವರು ಶನಿವಾರ ಪ್ರತಿಕ್ರಿಯೆ ನೀಡಿದರು. ಮಾಜಿ ಸಿಎಂ ಕುಮಾರಸ್ವಾಮಿ ಅವರು ಎಕ್ಸ್ ಖಾತೆ ಮೂಲಕ ಯತೀಂದ್ರ ಅವರ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ವಿವೇಕಾನಂದ ಎಂಬುವವರು ಪೊಲೀಸ್ ಅಧಿಕಾರಿ ಎಂದು ಹೇಳಿರುವ ಬಗ್ಗೆ ಮಾಧ್ಯಮಗಳ ಪ್ರಶ್ನೆಗೆ ಶಿವಕುಮಾರ್ ಅವರು ಈ ರೀತಿ ಉತ್ತರಿಸಿದರು.



"ಕುಮಾರಣ್ಣ ಹಾಗೂ ವಿಜಯೇಂದ್ರ ಅವರು ಈಗ ಪಾರ್ಟ್ನರ್ ಗಳು. ಅವರ ಮಧ್ಯೆಯೇ ಗೊಂದಲ ಇರುವಾಗ ನಾನು ಹೇಗೆ ಪ್ರತಿಕ್ರಿಯೆ ನೀಡಲಿ. ಕುಮಾರಣ್ಣ ಎರಡು ಬಾರಿ ಮುಖ್ಯಮಂತ್ರಿಯಾಗಿದ್ದವರು. ಪಕ್ಷದ ಅಧ್ಯಕ್ಷರಾಗಿದ್ದವರು. ಅವರು ಆ ಸ್ಥಾನಗಳಿಗೆ ತಕ್ಕಂತೆ ಗೌರವ ಉಳಿಸಿಕೊಳ್ಳಬೇಕು ಎಂದು ನಾನು ನಿರೀಕ್ಷಿಸುತ್ತೇನೆ.

ಅವರ ತಂದೆಯವರು ಅನೇಕ ಬಾರಿ ಈ ಬಗ್ಗೆ ಸಲಹೆ ನೀಡಿದ್ದಾರೆ ಎಂಬ ವಿಚಾರ ಕೇಳಿದೆ. ದೇವೇಗೌಡರು, ಯಡಿಯೂರಪ್ಪ, ಎಸ್.ಎಂ ಕೃಷ್ಣ, ವೀರಪ್ಪ ಮೊಯ್ಲಿ, ಸದಾನಂದಗೌಡರು, ಬಸವರಾಜ ಬೊಮ್ಮಾಯಿ ಅವರು ಕೂಡ ಮಾಜಿ ಮುಖ್ಯಮಂತ್ರಿಗಳು. ಅವರುಗಳು ಇವರಂತೆ ಸುಮ್ಮ ಸುಮ್ಮನೆ ಮಾತನಾಡುತ್ತಾರಾ? ದೇವರು, ಜನ ಕೊಟ್ಟ ಅವಕಾಶ, ಬೆಂಬಲಿಗರ ಸಹಾಯ, ತಂದೆ ತಾಯಿ ಆಶೀರ್ವಾದ, ತಮ್ಮದೇ ಆದ ಹೋರಾಟದಿಂದ ಕುಮಾರಸ್ವಾಮಿ ಮುಖ್ಯಮಂತ್ರಿ ಆಗಿದ್ದವರು. ಆ ಸ್ಥಾನಕ್ಕೆ ಧಕ್ಕೆಯಾಗದಂತೆ ನಡೆದುಕೊಳ್ಳಬೇಕು.

## ಎಸ್.ಎಫ್. ಆದಿ, ದಿಗಂಬರ ಎಂ.ಪೂಜಾರರಿಗೆ ಪ್ರಶಸ್ತಿ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶ್ರೀ ಮಹಾತಪಸ್ವಿ ಸೇವಾ ಪ್ರತಿಷ್ಠಾನ ಕೇಂದ್ರ ಕಚೇರಿ ಹರಿಹರ ಇವರು ಪ್ರತಿವರ್ಷ ಕೊಡಮಾಡುವ ರಾಜ್ಯಮಟ್ಟದ ಪ್ರಶಸ್ತಿಗೆ ಪಟ್ಟಣದ ನಿವೃತ್ತ ಶಿಕ್ಷಕ ಎಸ್.ಎಫ್. ಆದಿ ಮತ್ತು ವರದಿಗಾರ ದಿಗಂಬರ ಎಂ.ಪೂಜಾರ ಭಾಜನರಾಗಿದ್ದಾರೆ.





ಎಸ್.ಎಫ್. ಆದಿ ಪಟ್ಟಣದ ಉಮಾ ವಿದ್ಯಾಲಯದಲ್ಲಿ 35 ವರ್ಷಗಳಿಂದ ಕನ್ನಡ ಭಾಷಾ ಶಿಕ್ಷಕರಾಗಿ ಸೇವೆ ಸಲ್ಲಿಸಿ, ನಿವೃತ್ತರಾಗಿದ್ದಾರೆ. ಪುಲಿಗೆರೆಯ ಪುರಾಣ ಪ್ರವಚನದಲ್ಲಿ ವಿಶಿಷ್ಟ ಹೆಸರು ಮಾಡಿರುವ ಇವರು ಸುಮಾರು ಒಂದುವರೆ ದಶಕಗಳಿಂದ ಪುರಾಣ ಪ್ರವಚನಗಳನ್ನು ಜನರಿಗೆ ಮನಮುಟ್ಟುವಂತೆ ಹೇಳುವದರಲ್ಲಿ ನಿಸ್ಸೀಮರಾಗಿದ್ದಾರೆ. ಹಲವಾರು ಪ್ರಶಸ್ತಿಗಳಿಗೆ ಭಾಜನರಾಗಿರುವ ಇವರಿಗೆ ಶ್ರೀ ಮಹಾತಪಸ್ವಿ ಸೇವಾ ಪ್ರತಿಷ್ಠಾನದವರು ವರ್ಷದ ವಿಶೇಷ ಪ್ರಶಸ್ತಿಯಾಗಿ 'ಪುಲಿಗೆರೆ ಪುರಾಣ ಪ್ರಭೆ' ಪ್ರಶಸ್ತಿಗೆ ಆಯ್ಕೆ ಮಾಡಿದ್ದಾರೆ.

ಪಟ್ಟಣದ ದಿಗಂಬರ ಎಂ.ಪೂಜಾರ ಕಳೆದ 2 ದಶಕಗಳಿಂದ ಸುದ್ದಿಗಾರರಾಗಿ ವೃತ್ತಿಯಲ್ಲಿ ಪ್ರಾಮಾಣಿಕ ಸೇವೆ ಸಲ್ಲಿಸುತ್ತಿದ್ದಾರೆ. ಸ್ಥಳೀಯ ಮಟ್ಟದಲ್ಲಿ ಹಲವಾರು ಸಂಘ-ಸಂಸ್ಥೆಗಳು ಇವರ ಸೇವೆಯನ್ನು ಗೌರವಿಸಿವೆ. ವೃತ್ತಿಯಲ್ಲಿ ಪ್ರಾಮಾಣಿಕ ಸೇವೆ ಗುರುತಿಸಿ ಶ್ರೀ ಮಹಾತಪಸ್ವಿ ಸೇವಾ ಪ್ರತಿಷ್ಠಾನದವರು ಪ್ರಥಮ ಬಾರಿಗೆ ಪ್ರಾರಂಭಿಸಿರುವ 'ಪತ್ರಿಕಾ ಸಿರಿ' ವಿಶೇಷ ಪ್ರಶಸ್ತಿಗೆ ಆಯ್ಕೆ ಮಾಡಿದ್ದಾರೆ.

ಪ್ರಶಸ್ತಿಯು ನ.26ರಂದು ತಮಿಳುನಾಡಿನ ಕೃಷ್ಣಗಿರಿ ಜಿಲ್ಲೆಯ ಹೊಸೂರು ನಗರ ಡಾ. ಎಂ.ಜಿ.ಆರ್ ನಗರದ ಅಧಿಯಮಾನ ಕಾಲೇಜ್ ಆಫ್ ಇಂಜಿನಿಯರಿಂಗ್ ಸಭಾಂಗಣದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಪ್ರತಿಷ್ಠಾನದ ಸಂಸ್ಥಾಪಕರು, ಪರಮಪೂಜ್ಯ ಅವಧೂತ ಕವಿಗುರುರಾಜ ಗುರೂಜಿ ಅವರ ದಿವ್ಯ ಸಾನ್ನಿಧ್ಯದಲ್ಲಿ ಪ್ರದಾನ ಮಾಡಲಾಗುವದು. ಕಾರ್ಯಕ್ರಮದಲ್ಲಿ ಹಿರಿಯ ಸಂಶೋಧಕ ಡಾ.ಮಲ್ಲೇಪುರಂ ಜಿ.ವೆಂಕಟೇಶ ಮತ್ತು ವಿಧಾನ ಪರಿಷತ್ ಸದಸ್ಯೆ ತಾರಾ ಅನುರಾಧ ಸೇರಿದಂತೆ ಅನೇಕ ಗಣ್ಯರು ಪಾಲ್ಗೊಳ್ಳಲಿದ್ದಾರೆ.

## 'ತುಷಾರ್' ಚಲನಚಿತ್ರದ ಹಾಡು ಬಿಡುಗಡೆ

■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಅಪರಾಧಕ್ಕೆ ಸವಾಲು ಕನ್ನಡ ದಿನಪತ್ರಿಕೆ ಸಹಯೋಗದಲ್ಲಿ ಮಲಗೊಂಡ ಫಿಲಂ ಪ್ರೊಡಕ್ಷನ್ ಬ್ಯಾನರಡಿಯಲ್ಲಿ ನಿರ್ಮಾಣವಾಗುತ್ತಿರುವ 'ತುಷಾರ' ಚಲನಚಿತ್ರದ 'ನಾ ನಿನ್ನ ಕಾಯೋ ಕಾವಲುಗಾರ' ಎಂಬ ಹಾಡು ಬಿಡುಗಡೆಗೊಂಡಿದೆ.

ಪವನಕುಮಾರ ಬೂದಿಹಾಳ ಸಾಹಿತ್ಯ ಬರೆದಿದ್ದು, ಮಂಜು ಕವಿ ಸಂಗೀತ ಸಂಯೋಜನೆಯಲ್ಲಿ ಮೂಡಿಬಂದಿರುವ ಈ ಹಾಡಿಗೆ ಹೊಸ ಪ್ರತಿಭೆ ಆರ್.ಜೆ. ನವೀನ್ ಧ್ವನಿಯಾಗಿದ್ದಾರೆ. ಈ ಹಾಡನ್ನು ಚಾರ್ವಿ ಮ್ಯೂಸಿಕ್ ಯೂಟ್ಯೂಬ್ ಚಾನೆಲ್‌ನಲ್ಲಿ ಬಿಡುಗಡೆ ಮಾಡಲಾಯಿತು. ಈ ಸಂದರ್ಭದಲ್ಲಿ ಚಿತ್ರದ ನಟ, ನಿರ್ದೇಶಕ ವಿಶ್ವಪ್ರಕಾಶ ಟಿ.ಮಲಗೊಂಡ ಮಾತನಾಡಿ, ಈಗಾಗಲೇ ತುಷಾರ್ ಸಿನಿಮಾದ ಚಿತ್ರೀಕರಣ ಪೂರ್ಣಗೊಂಡಿದ್ದು ಸಿನಿಮಾದ ಪೋಸ್ಟ್ ಪ್ರೊಡಕ್ಷನ್ ಕಾರ್ಯ ಸಾಗಿದೆ. ತುಂಬಾ ಕನಸಿಟ್ಟುಕೊಂಡು ಮಾಡಿರುವ ಈ ಚಲನಚಿತ್ರದ ಹಾಡನ್ನು ಇದೀಗ ಬಿಡುಗಡೆ ಮಾಡಿದ್ದೇವೆ. ಈ ಹಾಡಿನ ಚಿತ್ರೀಕರಣ ಉತ್ತರ ಕರ್ನಾಟಕ ಹಾಗೂ ಬೆಂಗಳೂರಿನ ಸುತ್ತಮುತ್ತ ನಡೆಸಲಾಗಿದೆ ಎಂದರು.



ಈ ಸಿನಿಮಾಕ್ಕೆ ವಿಶ್ವಪ್ರಕಾಶ ಮಲಗೊಂಡ ನಟನೆಯ ಜೊತೆಗೆ ಕಥೆ, ಚಿತ್ರಕಥೆ ಬರೆದು ನಿರ್ದೇಶನ ಮಾಡಿದ್ದಾರೆ. ಮಂಜುಕವಿ ಸಂಗೀತ, ಸಾಹಿತ್ಯ, ಸಂಭಾಷಣೆ, ಪವನ್ ಕುಮಾರ್ ಬೂದಿಹಾಳ, ರವಿ ಕುಂಟೋಜಿ ಛಾಯಾಗ್ರಹಣ, ಚಂದು ಅವರ ಸಂಕಲನ, ಸಹ ನಿರ್ದೇಶಕರಾಗಿ ಸುಧಾ ಅಣ್ಣಾಶೇಠ, ಉಮೇಶ್ ಕೆ.ಎನ್. ಅವರ ಪ್ರಚಾರ ಕಲೆ, ಪತ್ರಿಕಾ ಸಂಪರ್ಕ ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಹಂಡಿಗಿ, ಹರೀಶ್ ಅರಸು, ಪೋಸ್ಟರ್ ಡಿಸೈನ್ ವಿಶ್ವ ಬಿರಾದಾರ, ಪ್ರಸಾದ್ ತೆ-ೞಟದ ಅವರದಿದ್ದು, ತಂಡದಲ್ಲಿ ಪೃಥ್ವಿರಾಜ್ ನಾಯಕ, ಚಂದ್ರಕಾಂತ ಬೂದಿಹಾಳ, ಶ್ರೇಯಶ್ ದೇಶಪಾಂಡೆ ಮೊದಲಾದವರಿದ್ದಾರೆ.

## ಕಸ್ಟಮ್ಸ್ ಅಧಿಕಾರಿಗಳಿಂದ ಒಂದು ಕೋಟಿಗೂ ಅಧಿಕ ಮೌಲ್ಯದ ಚಿನ್ನ ವಶ

■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಮೂರು ಪ್ರತ್ಯೇಕ ಪ್ರಕರಣಗಳಲ್ಲಿ ಒಂದು ಕೋಟಿಗೂ ಅಧಿಕ ಮೌಲ್ಯದ ಚಿನ್ನವನ್ನು ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಕಸ್ಟಮ್ಸ್ ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ.

ಅಕ್ರಮವಾಗಿ ಸಾಗಿಸಲು ಯತ್ನಿಸಿದ ಸುಮಾರು 1.ಕೆ.ಜಿ. ಚಿನ್ನ ವಶ 58.39.805 ಬೆಲೆಯ ಚಿನ್ನ ವಶ ಬ್ಯಾಂಕಾಕ್ ನಿಂದ ಬರ್ತಿದ್ದ ಮೂರು ಜನ ಗಂಡಸರು, ಚಿನ್ನದ ಚೈನ್ ಕಟ್ ಪೀಸಸ್ ನ ಒಳ ಉಡುಪುಗಳಲ್ಲಿ ಬಚ್ಚಿಟ್ಟು ಸಾಗಿಸಲು ಯತ್ನಿಸಿದ ಖದೀಮರು ಕೊಲಂಬೋ ದಿಂದ ಬಂದ

ಇಬ್ಬರು ಹೆಂಗಸರ ಪರಿಶೀಲನೆ ವೇಳೆ ಅಕ್ರಮ ಚಿನ್ನ ಸಾಗಾಟ ಪತ್ತೆ 16-11-23ರಂದು ಕಾರ್ಯಾಚರಣೆ ನಡೆಸಿ ಅಕ್ರಮ ಪತ್ತೆ ಹಚ್ಚಿದ ಕಸ್ಟಮ್ಸ್ ಅಧಿಕಾರಿಗಳು.. ಕಸ್ಟಮ್ಸ್ ಅಧಿಕಾರಿಗಳು ಮಸ್ಕಟ್ ನಿಂದ ಬಂದ ಚಿನ್ನದ ಕಳ್ಳನನ್ನ ವಶಕ್ಕೆ ಪಡೆದಿದ್ದಾರೆ ಈತ ಸಹ 1.113 ಗ್ರಾಂ ಚಿನ್ನದ ಕಳ್ಳಸಾಗಾಟಕ್ಕೆ ಯತ್ನಿಸಿದ್ದ ಈತ ಎದೆ ಬಟ್ಟೆಯ ಪೌಚ್ ಮೂಲಕ ಚಿನ್ನದ ಕಳ್ಳಸಾಗಾಟಕ್ಕೆ ಯತ್ನಿಸಿ ಸಿಕ್ಕಿಬಿದ್ದಿದ್ದಾನೆ 68 ಲಕ್ಷ 18ಸಾವಿರ ಬೆಲೆಯ ಚಿನ್ನ ವಶಕ್ಕೆ ಪಡೆದಿದ್ದಾರೆ.

**ನೀವೂ ನಮ್ಮ ಜೊತೆ ಕೈಜೋಡಿಸಿ**
**'ವಿಜಯಸಾಕ್ಷಿ'**
ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.
ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..
ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.
E-mail: vijayasakshidaily@gmail.com
ಮೊ : 9019256545

## ಬಸವದಳದ 'ಶರಣ ಸಂಗಮ' ಕಾರ್ಯಕ್ರಮ ಇಂದು



■ವಿಜಯಸಾಕ್ಷಿ ಸುದ್ದಿ, ಗದಗ
ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ನ. 19ರಂದು ಬೆಳಿಗ್ಗೆ 11 ಗಂಟೆಗೆ ನಡೆಯಲಿರುವ ಬಸವದಳದ 1568ನೇ ಶರಣ ಸಂಗಮದಲ್ಲಿ ಷಟಸ್ಥಳ ಚಕ್ರವರ್ತಿ ಚನ್ನಬಸವಣ್ಣವರ ಜಯಂತಿ ಹಾಗೂ ಬಸವಾದಿ ಶರಣರ ವಚನಗಳ ಹಿರಿಮೆ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ ಶರಣ ವಿ.ಕೆ. ವಹಿಸುವರು. ಅಂಬಿಗ ಚೌಡಯ್ಯ ಪ್ರತಿಷ್ಠಾನದ ಅಧ್ಯಕ್ಷ ಶರಣ ಎಸ್.ಎಂ. ಹಾದಿಮನಿ ಉಪನ್ಯಾಸ ಮಾಡುವರು. ಕಾರಣ ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಿಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

## ನ.21ರಂದು ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ
110 ಕೆ.ವ್ಹಿ ಶಿರಹಟ್ಟಿ ಉಪ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ಕೆಲಸ ಕೈಗೊಳ್ಳುವುದರಿಂದ ನ.21ರಂದು ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30ರವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ. ಕಾರಣ 110 ಕೆ.ವ್ಹಿ ಶಿರಹಟ್ಟಿ ಉಪಕೇಂದ್ರದಿಂದ ವಿದ್ಯುತ್ ಪೂರೈಕೆಯಾಗುತ್ತಿರುವ ನಗರ/ ಗ್ರಾಮೀಣ ಪ್ರದೇಶಗಳ 11 ಕೆ.ವ್ಹಿ ವಿತರಣಾ ಮಾರ್ಗಗಳಲ್ಲಿ, ಎನ್.ಜೆ.ವೈ ಫೀಡರ್, ಐ.ಪಿ.ಪಿ ಫೀಡರ್ ಹಾಗೂ ಮೆ: ಬಿ.ಪಿ.ಸಿ.ಎಲ್ 1 ಮತ್ತು 2, ಎಲಿಶಿರೂರ ಇವರ ಗಾಳಿಯಂತ್ರ ಘಟಕಕ್ಕೆ ವಿದ್ಯುತ್ ವ್ಯತ್ಯಯವಾಗಲಿದೆ.

ಕಾರಣ, ಸಾರ್ವಜನಿಕರು ಈ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕೆಂದು ಕಾರ್ಯನಿರ್ವಾಹಕ ಇಂಜಿನಿಯರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜನರ ಕಷ್ಟಕ್ಕೆ ಸರ್ಕಾರ ಸ್ಪಂದಿಸಲಿ

▶▶ಮೊದಲನೇ ಪುಟದಿಂದ
ರೈತರ ಕಷ್ಟ ಹೇಳತೀರದಾಗಿದೆ. ಮುಖ್ಯಮಂತ್ರಿಗಳಿಂದ ಇಂತಹ ಬೋಗಸ್ ಗ್ಯಾರಂಟಿಗಳ ನಿರೀಕ್ಷೆ ಇರಲಿಲ್ಲ. ದಲಿತರ ಹಕ್ಕುಗಳನ್ನು ಕಸಿದುಕೊಳ್ಳುತ್ತಿದ್ದಾರೆ. ರಾಜ್ಯವನ್ನು ಲೂಟಿ ಹೊಡೆದು ಜೈಲಿಗೆ ಹೋಗಿ ಬಂದವರು ಮತ್ತು ಎಲ್ಲದರಲ್ಲೂ ಕಮೀಷನ್ ಪಡೆಯುವ ಸರ್ಕಾರದ ಮಂತ್ರಿಗಳಿಗೆ ಹೆಚ್.ಡಿ. ಕುಮಾರಸ್ವಾಮಿ ಅವರ ಬಗ್ಗೆ ಇಲ್ಲಸಲ್ಲದ ಆರೋಪ ಮಾಡುವ ನೈತಿಕ ಹಕ್ಕಿಲ್ಲ. ಮೊದಲು ಬರಗಾಲದ ಸಂಕಷ್ಟದಲ್ಲಿ ಸಿಲುಕಿರುವ ಜನರ ಕಷ್ಟಕ್ಕೆ ಸ್ಪಂದಿಸುವ ಕೆಲಸ ಮಾಡಲಿ. ಇಲ್ಲದಿದ್ದರೆ ರಾಜ್ಯ ಸರ್ಕಾರದ ವಿರುದ್ಧ ಬೀದಿಗಿಳಿಯಬೇಕಾಗುತ್ತದೆ ಎಂದು ಎಚ್ಚರಿಸಿದರು.

ರೈತರ ಜಮೀನುಗಳಿಗೆ ಭೇಟಿ ನೀಡಿ, ಬರಗಾಲದ ವಾಸ್ತವಾಂಶ ವರದಿ ಸಂಗ್ರಹಿಸುವಂತೆ ಜೆಡಿಎಸ್ ವರಿಷ್ಠ ಎಚ್.ಡಿ. ದೇವೆಗೌಡ ಮತ್ತು ಮಾಜಿ ಸಿಎಂ ಹೆಚ್.ಡಿ. ಕುಮಾರಸ್ವಾಮಿ ಅವರ ಮಾರ್ಗದರ್ಶನದಲ್ಲಿ ನೇರವಾಗಿ ರೈತರ ಜಮೀನಿಗೆ ಭೇಟಿ ನೀಡಿ, ರೈತರ ಕಷ್ಟ-ಅಹವಾಲುಗಳನ್ನು ಸ್ವೀಕರಿಸಿ ಜನರ ಧ್ವನಿಯಾಗುತ್ತೇವೆ ಎಂದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ವೀರಭದ್ರಪ್ಪ ಹಾಲಹರವಿ, ಹು.ಧಾ ಜೆಡಿಎಸ್ ಜಿಲ್ಲಾಧ್ಯಕ್ಷ ಗುರುರಾಜ ಹುಣಸಿಮರದ, ಗದಗ ಜಿಲ್ಲಾಧ್ಯಕ್ಷ ಎಂ.ವೈ. ಮುಧೋಳ, ಜಿಲ್ಲಾ ಕಾರ್ಯಾಧ್ಯಕ್ಷ ಸಿ.ಎಸ್. ಪಾಟೀಲ್, ನರಗುಂದ ತಾಲೂಕಾಧ್ಯಕ್ಷ ಆರ್.ಎನ್. ಪಾಟೀಲ, ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಅಧ್ಯಕ್ಷ ಶಂಕರ ಬಾಳಿಕಾಯಿ, ಝಾಕೀರಹುಸೇನ್ ಹವಾಲ್ದಾರ್, ಪುರಸಭೆ ಸದಸ್ಯ ಪ್ರವೀಣ ಬಾಳಿಕಾಯಿ, ಗ್ರಾ.ಪಂ. ಸದಸ್ಯ ಪ್ರವೀಣ ಸೂರಣಗಿ, ಪ್ರಕಾಶ ದೊಡ್ಡಮನಿ, ವಿನಾಯಕ ಪರಭತ್, ಮಂಜುನಾಥ ದೊಡ್ಡಮನಿ, ವಿರುಪಾಕ್ಷಪ್ಪ ಸಾಸಲವಾಡ, ಈರಪ್ಪ ರಾಹುತರ, ನಿಂಬಣ್ಣ ಕಳ್ಳಿಹಾಳ ಸೇರಿದಂತೆ ಅನೇಕರು ಹಾಜರಿದ್ದರು.

## ಸ್ವಾಭಿಮಾನಿ ಕರವೇ ತಾಲೂಕಾ ಪದಾಧಿಕಾರಿಗಳ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ
ಸ್ವಾಭಿಮಾನಿ ಕರವೇ ಲಕ್ಷ್ಮೇಶ್ವರ ತಾಲೂಕಾ ಘಟಕದ ಪದಾಧಿಕಾರಿಗಳನ್ನು ಇತ್ತೀಚೆಗೆ ಆಯ್ಕೆ ಮಾಡಲಾಯಿತು.

ಗದಗ ಜಿಲ್ಲಾಧ್ಯಕ್ಷರಾದ ಎಮ್.ಎ. ಕುರ್ತಕೋಟಿ ಅವರ ನೇತೃತ್ವದಲ್ಲಿ ಪದಾಧಿಕಾರಿಗಳ ನೇಮಕ ನಡೆಯಿತು. ಲಕ್ಷ್ಮೇಶ್ವರ ತಾಲೂಕಾಧ್ಯಕ್ಷರನ್ನಾಗಿ ನಾಗರಾಜ್ ಲಮಾಣಿ, ಉಪಾಧ್ಯಕ್ಷರನ್ನಾಗಿ ಯಮನಪ್ಪ ಲಮಾಣಿ, ಗೌರವಾಧ್ಯಕ್ಷರನ್ನಾಗಿ ಗುಡದೇಶ್ವರ, ಪ್ರಧಾನ ಕಾರ್ಯದರ್ಶಿಯಾಗಿ ನಾಗರಾಜ್ ಗೋಣೆಪ್ಪನವರ ಅವರನ್ನು ಆಯ್ಕೆ ಮಾಡಲಾಯಿತು. ಈ ಸಂದರ್ಭದಲ್ಲಿ ರಾಜ್ಯ ಕಾರ್ಮಿಕ ನಾಯಕ ರಾ.ದೇ. ಕಾರಭಾರಿ, ಮೇರಿ ರಾದೇ ಕಾರಭಾರಿ ಮುಂತಾದವರು ಉಪಸ್ಥಿತರಿದ್ದರು.

### ದೆಹಲಿಯಲ್ಲಿ ನಡೆದ ಪ್ರಥಮ ರಾಷ್ಟ್ರೀಯ ಮಕ್ಕಳ ಸಾಹಿತ್ಯ ಸಮ್ಮೇಳನ

# ರಾಷ್ಟ್ರ ರಾಜಧಾನಿಯಲ್ಲಿ ಗಮನ ಸೆಳೆದ ಪ್ರಣತಿ



■ವಿಜಯಸಾಕ್ಷಿ ಸುದ್ದಿ, ಗದಗ
ಕರ್ನಾಟಕ ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್‌ನ ದೆಹಲಿ ಘಟಕದ ಸಹಯೋಗದಲ್ಲಿ ನವದೆಹಲಿಯ ಶ್ರೀ ಸತ್ಯಸಾಯಿ ಭವನದಲ್ಲಿ ಏರ್ಪಡಿಸಿದ್ದ 'ಪ್ರಥಮ ರಾಷ್ಟ್ರೀಯ ಕನ್ನಡ ಮಕ್ಕಳ ಸಾಹಿತ್ಯ ಸಮ್ಮೇಳನ'ದ ಮೊದಲ ವಿಚಾರಗೋಷ್ಠಿಯಲ್ಲಿ 'ಮಕ್ಕಳ ಹಕ್ಕುಗಳ ರಕ್ಷಣೆಯಲ್ಲಿ ಪೋಷಕರ ಹಾಗೂ ಸರ್ಕಾರದ ಪಾತ್ರ' ಎಂಬ ವಿಷಯ ಕುರಿತು ಪ್ರಬಂಧ ಮಂಡಿಸಿದ ಗದುಗಿನ ಬಾಲ ಸಾಹಿತಿ, ನಗರದ ಕೆಎಲ್‌ಇ ಶಾಲೆಯ ವಿಧ್ಯಾರ್ಥಿನಿ ಕು.ಪ್ರಣತಿ ಆರ್.ಗಡಾದ ಇಡೀ ವಿಚಾರಗೋಷ್ಠಿಯ ಗಮನ ಸೆಳೆಯುವ ಮೂಲಕ ಗದುಗಿನ ಕೀರ್ತಿ ಪತಾಕೆಯನ್ನು ರಾಷ್ಟ್ರದ ರಾಜಧಾನಿಯಲ್ಲಿ ಮೆರೆದಿದ್ದಾರೆ.

ಖ್ಯಾತ ವೈದ್ಯ ಸಾಹಿತಿ ಡಾ. ನಾ. ಸೋಮೇಶ್ವರ ಅವರು ಉದ್ಘಾಟಿಸಿದ ಈ ರಾಷ್ಟ್ರೀಯ ಮಕ್ಕಳ ಸಾಹಿತ್ಯ ಸಮ್ಮೇಳನದ ಮೊದಲ ವಿಚಾರಗೋಷ್ಠಿಯಲ್ಲಿ ಮಾತನಾಡಿದ ಪ್ರಣತಿ ಗಡಾದ, ಮಕ್ಕಳ ಹಕ್ಕುಗಳ ಸಾಕಾರದಿಂದಲೇ ಮಕ್ಕಳ ಸರ್ವಾಂಗೀಣ ಅಭಿವೃದ್ಧಿ ಸಾಧ್ಯ. ಮಕ್ಕಳ ಹಕ್ಕುಗಳ ಚಲಾವಣೆಗೆ ಈಗ ಎಲ್ಲರೂ ಇನ್ನಷ್ಟು ಒತ್ತು ಕೊಡಬೇಕಾಗಿದೆ. ಇಂದಿನ ಮಕ್ಕಳೇ ಇಂದಿನ ಪ್ರಜೆಗಳು.

ದೆಹಲಿಯ ಬಾಲ ಲೇಖಕಿ ಕು.ನೂತನ ಕೈಕಾಡೆ ಸಮ್ಮೇಳನದ ಅಧ್ಯಕ್ಷತೆ ವಹಿಸಿದ್ದಳು. ಈ ಸಮ್ಮೇಳನದಲ್ಲಿ ಕರ್ನಾಟಕ, ಕೇರಳ ಮಹಾರಾಷ್ಟ್ರ, ಹರಿಯಾಣ, ಗುಜರಾತ್, ಆಂಧ್ರಪ್ರದೇಶ, ಜಾರ್ಖಂಡ್ ಸೇರಿದಂತೆ ವಿವಿಧ ರಾಜ್ಯಗಳ 500ಕ್ಕೂ ಹೆಚ್ಚು ಮಕ್ಕಳು ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ರಾಷ್ಟ್ರೀಯ ಮಕ್ಕಳ ಸಾಹಿತ್ಯ ಸಮ್ಮೇಳನದ ಪರವಾಗಿ ಕು.ಪ್ರಣತಿ ಆರ್.ಗಡಾದರಿಗೆ ಪದಕ ಹಾಗೂ ಪ್ರಶಸ್ತಿಪತ್ರ ನೀಡಿ ಗೌರವಿಸಲಾಯಿತು.



ಹಾಗಾಗಿ ಜಾಗತಿಕ ಮಕ್ಕಳ ಹಕ್ಕುಗಳನ್ನು ಪರಿಪಾಲಿಸುವಲ್ಲಿ ಸರ್ಕಾರ ಹಾಗೂ ಪೋಷಕರ ಪಾತ್ರ ಮಹತ್ವದ್ದಾಗಿದೆ. ಮಕ್ಕಳು ಎಲ್ಲಿಯೇ ಇರಲಿ, ಯಾವುದೇ ಪ್ರದೇಶದಲ್ಲಿ ವಾಸವಾಗಿರಲಿ ಅವರಿಗೆಲ್ಲ ಜಾಗತಿಕ ಮಕ್ಕಳ ಹಕ್ಕುಗಳು ಅನ್ವಯಿಸುತ್ತವೆ ಎಂಬುದನ್ನು ಯಾರೂ ಮರೆಯಬಾರದು ಎಂದು ಪ್ರತಿಪಾದಿಸಿದಳು.

ಶಿವಮೊಗ್ಗದ ಕು.ಸುಮಂತ್ ಮಕ್ಕಳ ಸಾಹಿತ್ಯದ ಬೆಳವಣಿಗೆಯ ಸವಾಲುಗಳು, ಚಿತ್ರದುರ್ಗದ ಕು. ತಾನ್ವಿ ಸಿ.ಎಂ. ಮಕ್ಕಳಲ್ಲಿ ಸಂಸ್ಕೃತಿ-ಸಂಸ್ಕಾರಗಳು, ಬೆಂಗಳೂರಿನ ಕು.ಅನನ್ಯ, ಬಾಲ್ಯವನ್ನು ಕಸಿದುಕೊಳ್ಳುತ್ತಿರುವ ಮೊಬೈಲ್ ಕುರಿತು ಪ್ರಬಂಧ ಮಂಡಿಸಿದರು. ಮಕ್ಕಳ ಸಾಹಿತಿಗಳಾದ ರವಿರಾಜ್‌ಸಾಗರ ಹಾಗೂ ಮಮತಾ ಅರಸಿಕೆರೆ ಪ್ರತಿಕ್ರಿಯೆ ನೀಡಿದರು.

ಈ ಗೌರವಕ್ಕೆ ಪಾತ್ರರಾದ ಬಾಲಕವಿತ್ರಿ ಕು.ಪ್ರಣತಿ ಆರ್. ಗಡಾದ ಅವರನ್ನು ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ತು, ಕನ್ನಡ ಸಾಹಿತ್ಯ ಪರಿಷತ್ತು, ವಚನ ಸಾಹಿತ್ಯ ಹಾಗೂ ಸಾಂಸ್ಕೃತಿಕ ಪರಿಷತ್ತು, ಸಿರಿಗನ್ನಡ ವೇದಿಕೆ, ಸಂಗಮ ಪ್ರಕಾಶನ ವೇದಿಕೆ ಮುಂತಾದ ಸಂಘಟನೆಗಳು ಅಭಿನಂದಿಸಿವೆ.

## ನದಾಫ್ ಪಿಂಜಾರ ಸಂಘದ ಪದಾಧಿಕಾರಿಗಳ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ
ಕರ್ನಾಟಕ ರಾಜ್ಯ ನದಾಫ್ ಪಿಂಜಾರ ಸಂಘದ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ನಡೆಯಿತು. ತಾಲೂಕಾಧ್ಯಕ್ಷರಾಗಿ ಉಸ್ಮಾನ್ ಸಾಬ್ ಕರ್ಕಿಹಳ್ಳಿ, ಉಪಾಧ್ಯಕ್ಷರಾಗಿ ಫಕ್ರು ಸಾಬ್ ನದಾಫ್ ಚುಕ್ಕನ್ಕಲ್, ಮುರ್ತುಜಾ ಸಾಬ್ ಚುಟ್ಟದ್, ಮೀರಾ ಸಾಬ್ ಬನ್ನಿಗೋಳ, ಮಹಿಳಾ ಉಪಾಧ್ಯಕ್ಷೆಯಾಗಿ ಜರೀನಾ ಬೇಗಂ ರಶೀದ್ ಅಹಮದ್ ನೀರಲ್ಗಿ, ಮುಖ್ಯ ಕಾರ್ಯದರ್ಶಿಗಳಾಗಿ ಮುಸ್ತಫಾ ಕುದರಿಮೋತಿ, ಖಜಾಂಚಿಯಾಗಿ ಮರ್ದಾನ್ ಸಾಬ್ ಲುಂಗಿ, ಜಿಲ್ಲಾ ಪ್ರತಿನಿಧಿಗಳಾಗಿ ಶಾಬುದ್ದೀನ್ ಸಾಬ್, ನೂರ್ ಬಾಷಾ ಕುಕನೂರು, ಅಲ್ಲಿ ಸಾಬ್ ಗಬ್ಬೂರ್, ರಂಜಾನ್ ಸಾಬ್ ಕಂಬಳಿ, ಸಂಘಟನಾ ಕಾರ್ಯದರ್ಶಿಯಾಗಿ ಖಾಜಾವಲಿ ಮಂಗಳಾಪೂರ ಮುಂತಾದವರು ಅವಿರೋಧವಾಗಿ ಆಯ್ಕೆಯಾದರು.

ಕೊಪ್ಪಳ ತಾಲೂಕು ಹಾಗೂ ನಗರ ಘಟಕದ ಆಜೀವ ಸದಸ್ಯತ್ವ ಹೊಂದಿದ ಮತದಾರರು ಕೊಪ್ಪಳ ನಗರದ ಹಜರತ್ ಮರ್ದಾನ್ ಎ ಗೈಬ್ ದರ್ಗಾ ಶರೀಫ್ ಆವರಣದಲ್ಲಿ ಶನಿವಾರ ರಾಜ್ಯ ಘಟಕದ ಸೂಚನೆಯಂತೆ 5 ವರ್ಷಗಳ ಅವಧಿಗೆ ಪದಾಧಿಕಾರಿಗಳನ್ನು ಸಮಾಜದ ಜಿಲ್ಲಾಧ್ಯಕ್ಷ ಕೆ.ಎಫ್. ಮುದ್ದಾಬಳ್ಳಿ, ಜಿಲ್ಲಾ ಮಹಿಳಾ ಅಧ್ಯಕ್ಷೆ ರೇಷ್ಮಾ ಖಾಜಾವಲಿ ಬನ್ನಿಕೊಪ್ಪ, ತಾಲೂಕಾ ಮಾಜಿ ಅಧ್ಯಕ್ಷ ಅಲ್ಲಿ ಸಾಬ್ ಗೂಂದಿ ಹೊಸಳ್ಳಿ ಸೇರಿದಂತೆ ಮುಖಂಡರ ಮಾರ್ಗದರ್ಶನದಲ್ಲಿ ಅವಿರೋಧ ಆಯ್ಕೆ ಮಾಡಲಾಯಿತು ಎಂದು ಸಂಘದ ಪ್ರಕಟಣೆ ತಿಳಿಸಿದೆ.

## ಮತದಾರರ ವಿಶೇಷ ನೋಂದಣಿ ಅಭಿಯಾನ ಪರಿಶೀಲನೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ
ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಶನಿವಾರ ಮತ್ತು ಭಾನುವಾರ ಜಿಲ್ಲೆಯ ಎಲ್ಲ ಮತಗಟ್ಟೆಗಳಲ್ಲಿ ಆಯೋಜಿಸಿರುವ ಮತದಾರರ ನೋಂದಣಿ ವಿಶೇಷ ಅಭಿಯಾನದ ಪ್ರಗತಿಯನ್ನು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರು ಧಾರವಾಡ ನಗರದ ವಿವಿಧ ಮತಗಟ್ಟೆಗಳಿಗೆ ಶನಿವಾರ ಮಧ್ಯಾಹ್ನ ಭೇಟಿ ನೀಡಿ, ನೋಂದಣಿ ಅಭಿಯಾನದ ಪ್ರಗತಿ ಪರಿಶೀಲಿಸಿದರು.



ವಿದ್ಯಾರಣ್ಯ ಶಾಲೆಯ ವಿವಿಧ ಮತಗಟ್ಟೆಗಳಿಗೆ ಭೇಟಿ ನೀಡಿ ಪರಿಶೀಲಿಸಿದರು.

ತಹಸೀಲ್ದಾರ ದೊಡ್ಡಪ್ಪ ಹೂಗಾರ, ಕಂದಾಯ ನಿರೀಕ್ಷಕ ಗುರು ಸುಣಗಾರ, ಗ್ರಾಮ ಆಡಳಿತ ಅಧಿಕಾರಿ ಕಸಬಾ, ಮತಗಟ್ಟೆ ಅಧಿಕಾರಿಗಳು ಉಪಸ್ಥಿತರಿದ್ದರು.

ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರು ಶನಿವಾರ ಮಧ್ಯಾಹ್ನ ಅಮ್ಮಿನಭಾವಿ ಗ್ರಾಮದ ವಿವಿಧ ಮತಗಟ್ಟೆಗಳಿಗೆ ಭೇಟಿ ನೀಡಿ, ಅಭಿಯಾನ ಪರಿಶೀಲಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ತಹಸೀಲ್ದಾರ ಪ್ರವೀಣ ಹುಚ್ಚನ್ನವರ, ಗ್ರಾಮ ಆಡಳಿತಾಧಿಕಾರಿ ವೆಂಕಟೇಶ ಹಟ್ಟಿಯವರ, ಮತಗಟ್ಟೆ ಅಧಿಕಾರಿಗಳು ಉಪಸ್ಥಿತರಿದ್ದರು.

### ಕಳಪೆ ಗುಣಮಟ್ಟದ ಪ್ಲೈವುಡ್ ನೀಡಿದ ಹುಬ್ಬಳ್ಳಿಯ ಆರ್.ಬಿ. ಗ್ಲಾಸ್ ಅಂಗಡಿಗೆ 1,80 ಲಕ್ಷ ರೂ. ದಂಡ

## ದೂರುದಾರರಿಗೆ ಪರಿಹಾರ ನೀಡಲು ಆದೇಶಿಸಿದ ಗ್ರಾಹಕ ಆಯೋಗ

■ವಿಜಯಸಾಕ್ಷಿ ಸುದ್ದಿ, ಧಾರವಾಡ
ಮುಧೋಳ ತಾಲೂಕಿನ ವೀರಣ್ಣಾ ರಾಮತೀರ್ಥ ಎಂಬುವವರು ಹುಬ್ಬಳ್ಳಿಯ ಗೋಕುಲ ರಸ್ತೆಯಲ್ಲಿರುವ ಆರ್.ಬಿ. ಗ್ಲಾಸ್ & ಪ್ಲೈವುಡ್ ಅಂಗಡಿಯಲ್ಲಿ 15-02-2022ರಂದು ರೂ.32,808 ಮೌಲ್ಯದ ವಿವಿಧ ನಮೂನೆಯ ಪ್ಲೈವುಡ್‌ಗಳನ್ನು ಖರೀದಿಸಿದ್ದರು. ಅವುಗಳನ್ನು ತಮ್ಮ ಮನೆಯ ಉಪಕರಣಗಳಿಗೆ ತಮಗೆ ಬೇಕಾದ ರೀತಿಯಲ್ಲಿ ಅಳವಡಿಸಿದ್ದರು. ಅದಕ್ಕೆ ದೂರುದಾರ ಕಾರ್ಪೆಂಟರ್‌ಗೆ ಹಾಗೂ ಇತರ ಸಲಕರಣೆಗಳಿಗೆ ಸಾಕಷ್ಟು ಹಣ ಖರ್ಚು ಮಾಡಿದ್ದರು.




ಆದರೆ ಕೆಲವೇ ಸಮಯದಲ್ಲಿ ಆ ಎಲ್ಲಾ ಪ್ಲೈವುಡ್‌ಗಳಿಗೆ ಗೆದ್ದಲು ಹತ್ತಿತು. ಅದರಿಂದ ದೂರುದಾರರು ನಷ್ಟ ಅನುಭವಿಸುವಂತಾಗಿತ್ತು. ಈ ಸಂಗತಿಯನ್ನು ಅಂಗಡಿ ಮಾಲೀಕನಿಗೆ ತಿಳಿಸಿ ಬೇರೆ ಪ್ಲೈವುಡ್ ಅಥವಾ ಹಣ ಕೊಡಲು ಸಾಕಷ್ಟು ಸಾರಿ ಕೇಳಿಕೊಂಡಿದ್ದರು. ಆದರೆ ಎದುರುದಾರರು ಅವುಗಳನ್ನು ಸರಿಪಡಿಸದೆ ಅಥವಾ ಹಣ ಹಿಂತಿರುಗಿಸದೇ ದೂರುದಾರರಿಗೆ ಸತಾಯಿಸುತ್ತಿದ್ದರು. ಎದುರುದಾರ ನಡಾವಳಿಕೆ ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನತೆ ಆಗುತ್ತದೆ ಎಂದು ಹೇಳಿ ಎದುರುದಾರರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ದೂರುದಾರ ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ 29-03-2023ರಂದು ದೂರು ಸಲ್ಲಿಸಿದ್ದರು.

ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷ ಈಶಪ್ಪ ಭೂತೆ ಹಾಗೂ ಸದಸ್ಯರಾದ ವಿಶಾಲಾಕ್ಷಿ ಬೋಳಶೆಟ್ಟಿ ಮತ್ತು ಪ್ರಭು.ಸಿ. ಹಿರೇಮಠ, ದೂರುದಾರ ವಿಶ್ವಾಸದಿಂದ ಎದುರುದಾರರನ್ನು ನಂಬಿ ದೂರುದಾರನಿಗೆ ಮೋಸ ಆಗಿದೆ ಅನ್ನುವುದು ಮೇಲ್ನೋಟಕ್ಕೆ ಕಂಡುಬರುತ್ತದೆ. ಇಂತಹ ಎದುರುದಾರ ನಡಾವಳಿಕೆ ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನತೆ ಆಗುತ್ತದೆ ಎಂದು ಅಭಿಪ್ರಾಯಪಟ್ಟು ತೀರ್ಪು ನೀಡಿದ್ದಾರೆ.

ದೂರುದಾರರಿಗೆ ಆಗಿರುವ ಅನಾನುಕೂಲ ಮತ್ತು ಮಾನಸಿಕ ಹಿಂಸೆಗೆ ಪರಿಹಾರ, ಪ್ರಕರಣದ ಖರ್ಚು-ವೆಚ್ಚ ಹಾಗೂ ಪ್ಲೈವುಡ್ ಖರೀದಿ ಹಣ ಇತ್ಯಾದಿ ವೆಚ್ಚ ಸೇರಿ ತೀರ್ಪು ನೀಡಿದ ಒಂದು ತಿಂಗಳ ಒಳಗಾಗಿ ಒಟ್ಟು ರೂ.1,80,000 ಕೊಡುವಂತೆ ಆಯೋಗ ಆರ್.ಬಿ. ಗ್ಲಾಸ್ & ಪ್ಲೈವುಡ್ ಮಾಲೀಕರಿಗೆ ಆದೇಶಿಸಿದೆ.

## ಎಸ್‌ಎಸ್‌ಕೆ ಶ್ರೀ ಜಗದಂಬಾ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಛದ್ಮವೇಷ ಕಾರ್ಯಕ್ರಮ



■ವಿಜಯಸಾಕ್ಷಿ ಸುದ್ದಿ, ಬೆಟಗೇರಿ
ಮಕ್ಕಳ ದಿನಾಚರಣೆ ನಿಮಿತ್ತ ಬೆಟಗೇರಿ ಎಸ್‌ಎಸ್‌ಕೆ ಶ್ರೀ ಜಗದಂಬಾ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿಗಳಿಂದ ಛದ್ಮವೇಷ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ನಿರ್ಣಾಯಕರಾಗಿ ನ್ಯಾಯವಾದಿ ನಜೀಮ್ ಮುಲ್ಲಾ ಹಾಗೂ ಶಾರದಾ ಕರಬಿಷ್ಟಿ, ಮಧು ಪೂಜಾರಿ ಹಾಗೂ ಶೋಭಾ ಉಮಚಗಿ ಆಗಮಿಸಿದ್ದರು. ಶಿಕ್ಷಣ ಸಂಸ್ಥೆಯ ಚೇರಮನ್ ಜಿ.ವಿ. ಬಸವಾ, ಉಪಾಧ್ಯಕ್ಷ ದತ್ತು ಪವಾರ್, ಸಂಪನ್ಮೂಲ ವ್ಯಕ್ತಿಯಾದ ಬಿಆರ್‌ಸಿ ಪ್ರಕಾಶ್ ಮಂಗಳೂರು, ಶಾಮ ಲ್ಯಾಂಡ್, ಶಿಕ್ಷಣ ಸಂಸ್ಥೆಯ ಶಂಕರಸಾ ಮೇರವಾಡೆ, ಪ್ರಕಾಶ್ ಮಿಸ್ಕಿನ್, ಪಂಚ ಟ್ರಸ್ಟ್ ಕಮಿಟಿ ಅಧ್ಯಕ್ಷ ಲೋಕನಾಥ್ ಕಬಾಡಿ ವೇದಿಕೆಯಲ್ಲಿದ್ದರು.

ಶಾಲಾ ಮುಖ್ಯೋಪಾಧ್ಯಾಯೆ ಎಸ್.ಡಿ. ಬೆಣಕಲ್ಲ, ಸಿ.ಎಸ್. ಹವಳದ, ಪಂಚ ಟ್ರಸ್ಟ್ ಕಮಿಟಿಯ ಎಲ್ಲಾ ಸದಸ್ಯರು, ತರುಣ ಸಂಘ, ಮಹಿಳಾ ಮಂಡಲ, ಸಹ ಶಿಕ್ಷಕಿಯರು ಮತ್ತು ಪಾಲಕರು ಉಪಸ್ಥಿತರಿದ್ದರು.

### ಸಿದ್ಧಲಿಂಗ ನಗರದ ಸರಕಾರಿ ಪ್ರೌಢ ಶಾಲೆಯ ವತಿಯಿಂದ ಸನ್ಮಾನ ಸ್ವೀಕರಿಸಿದ ಆನಂದ್ ಬದಿ ಮಾತು

# ಕಲಿತ ಶಾಲೆಯಲ್ಲಿ ಸನ್ಮಾನ ನನ್ನ ಪಾಲಿಗೆ ದೊಡ್ಡ ಸೌಭಾಗ್ಯ



■ವಿಜಯಸಾಕ್ಷಿ ಸುದ್ದಿ, ಗದಗ
ನನಗೆ ಅಕ್ಷರ ಕಲಿಸಿ ಭವಿಷ್ಯ ರೂಪಿಸಿದ, ನಾ ಕಲಿತ ಶಾಲೆಯಲ್ಲಿ ಸನ್ಮಾನ ಸ್ವೀಕರಿಸುತ್ತಿರುವುದು ನನ್ನ ಪಾಲಿಗೆ ದೊಡ್ಡ ಸೌಭಾಗ್ಯ ಎಂದು ನಗರಸಭೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ( ಪರಿಸರ) ಆನಂದ್ ಬದಿ ಅಭಿಪ್ರಾಯಪಟ್ಟರು. ಅವರು ಬಸವರಾಜ್ ಹೊರಟ್ಟಿ ದಂಪತಿ ದತ್ತು ಪಡೆದ ಸಿದ್ದಲಿಂಗ ನಗರದಲ್ಲಿರುವ ಸರ್ಕಾರಿ ಪ್ರೌಢಶಾಲೆಯಲ್ಲಿ ಮಕ್ಕಳ ದಿನಾಚರಣೆ, ಪ್ರತಿಭಾ ಪುರಸ್ಕಾರ, ಸಾರ್ಥಕ ಸೇವೆ ಸಲ್ಲಿಸಿದ ಮಹನೀಯರಿಗೆ ಗೌರವ ಸನ್ಮಾನ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

25 ವರ್ಷಗಳ ಹಿಂದೆ ಇದೇ ಶಾಲೆಯಲ್ಲಿ ನಾನು ವಿದ್ಯಾರ್ಥಿಯಾಗಿ ಸಾಕಷ್ಟು ಕಲಿತಿದ್ದೇನೆ. ಅಂದಿನ ನೆನಪುಗಳು ನನಗೆ ಸದಾಕಾಲ ಸ್ಮರಣೀಯ. ಅಂದಿನ ಶಿಕ್ಷಕರು ತೋರಿದ ಮಾರ್ಗದಲ್ಲಿ ನಡೆದಿದ್ದರಿಂದ ಇಂದು ನಾನು ಉನ್ನತ ಹುದ್ದೆಯಲ್ಲಿ ಇರಲು ಸಾಧ್ಯವಾಗಿದೆ. ಕಲಿತ ಶಾಲೆಯ ಹಾಗೂ ಕಲಿಸಿದ ಶಿಕ್ಷಕರ ಋಣವನ್ನ ಪ್ರಾಮಾಣಿಕವಾಗಿ ತೀರಿಸುತ್ತೇನೆ ಎಂದು ಭಾವುಕರಾಗಿ ನುಡಿದರು.

ಸಿ.ಸಿ ರಸ್ತೆ ನಿರ್ಮಾಣಕ್ಕೆ ಕಾರಣೀಕರ್ತರಾಗಿ ಸಾರ್ಥಕ ಸೇವೆ ಸಲ್ಲಿಸಿದ ಆಯುಕ್ತರಾದ ಗಂಗಪ್ಪ, ಆನಂದ ಬದಿ, ನಗರಸಭೆ ಸದಸ್ಯರಾದ ವಿದ್ಯಾವತಿ ಗಡಗಿ, ಗುತ್ತಿಗೆದಾರ ವಾಸಿಂಅಕ್ರಮ ಅವರನ್ನು ಶಾಲೆಯ ವತಿಯಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಅವ್ವ ಸೇವಾ ಟ್ರಸ್ಟ್ ಸಂಚಾಲಕ ಡಾ.ಬಸವರಾಜ ಧಾರವಾಡ, ಡಯಟ್ ಪ್ರಾಚಾರ್ಯ ಜಿ.ಎಲ್. ಬಾರಾಟಕ್ಕೆ, ಅವ್ವ ಸೇವಾ ಟ್ರಸ್ಟ್ ಸಹ ಸಂಚಾಲಕ ಎಸ್.ಎಂ. ಅಗಡಿ, ಶಾಲಾ ಎಸ್‌ಡಿ.ಎಂಸಿ ಅಧ್ಯಕ್ಷೆ ರೇಣುಕಾ ರೋಣದ, ಮುಖ್ಯೋಪಾಧ್ಯಾಯೆ ಪಾರ್ವತಿ ವಸ್ತ್ರದ, ಜಯಲಕ್ಷ್ಮೀ ಬಿ. ಅಣ್ಣಿಗೇರಿ, ಎಸ್.ಆರ್. ಹನಮಗೌಡ್ರ, ಎಂ.ಪಿ. ಸಾಂಬ್ರಾಣಿ, ಎಸ್.ಬಿ. ಗುಳೇದವರ, ಎಸ್.ಎಂ. ಪತ್ತಾರ, ಎಸ್.ಎ. ಬಾಣದ, ಎಸ್.ಎ. ಗದ್ದನಕೇರಿ, ಎನ್.ಆರ್. ಶಿರೋಳ, ಎಸ್.ಯು. ಕುಷ್ಟಗಿ, ಜಿ.ಎನ್. ಅಳವಂಡಿ, ಪಿ.ವ್ಹಿ. ದಾಸರ, ಎಲ್.ಎಸ್. ಮಾಳೊತ್ತರ ಮುಂತಾದವರು ಉಪಸ್ಥಿತರಿದ್ದರು. ಎಸ್.ಜಿ. ಕುಲಗುಡಿ ಹಾಗೂ ಎಸ್.ಎಸ್. ಗಾಳಿ ಕಾರ್ಯಕ್ರಮ ನಿರೂಪಿಸಿದರು. ಎಮ್.ಆಯ್. ಶಿವನಗೌಡ್ರ ವಂದಿಸಿದರು.


ಕರ್ನಾಟಕ ಸರ್ಕಾರ
**ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ**
ಕಾರ್ಯನಿರ್ವಾಹಕ ಇಂಜಿನಿಯರ್‌ರವರ ಕಛೇರಿ
ಗ್ರಾ.ಕು.ನೀ & ನೈ ವಿಭಾಗ, ಇಂಡಸ್ಟ್ರೀಯಲ್ ಎಸ್ಟೇಟ್, ಹುಬ್ಬಳ್ಳಿ ರಸ್ತೆ, ಗದಗ.
Phone: 08372-237980 e mail: ee.rws.gdg@gmail.com
ಕಾ.ಇಂ.ಗ್ರಾ.ಕು.ನೀ&ನೈ.ವಿ/ಗದಗ/ ಕಿ.ಇಂ/ಟೆಂಡರ್/2023-24/830 ದಿನಾಂಕ: 18.11.2023

**ಟೆಂಡರ್ ಪ್ರಕಟಣೆ**

ಗ್ರಾಮೀಣ ಕುಡಿಯುವ ನೀರು ಸರಬರಾಜು & ನೈರ್ಮಲ್ಯ ವಿಭಾಗ ಗದಗ, ಜಿಲ್ಲಾ ಮಟ್ಟದ ಪ್ರಯೋಗಾಲಯಕ್ಕೆ ಕುಡಿಯುವ ನೀರಿನ ಗುಣಮಟ್ಟ ಪರೀಕ್ಷೆಗಾಗಿ ಅವಶ್ಯವಿರುವ ಎ.ಆರ್.ಗ್ರೇಡ್ ಉತ್ತಮ ಗುಣಮಟ್ಟದ ರಾಸಾಯನಿಕಗಳ/ವಸ್ತುಗಳು ಹಾಗೂ ಉಪಕರಣಗಳನ್ನು ಖರೀದಿಸುವ ಸಲುವಾಗಿ, ಕುಡಿಯುವ ನೀರಿನ ಗುಣಮಟ್ಟ ಪರೀಕ್ಷೆ ಮಾಡುವ ಪ್ರಯೋಗಾಲಯಗಳಿಗೆ ರಾಸಾಯನಿಕಗಳ/ವಸ್ತುಗಳು ಹಾಗೂ ಉಪಕರಣಗಳನ್ನು ಸರಬರಾಜು ಮಾಡುವಂತಹ ಏಜೆನ್ಸಿಗಳಿಂದ ಐಟಂ ದರದಲ್ಲಿ "ಇ ಪ್ರೊಕ್ಯುರಮೆಂಟ್" ಮುಖಾಂತರ ಟೆಂಡರ್ ಕರೆಯಲಾಗಿದೆ.

| ಕ್ರ ಸಂ | ಇಂಡೆಂಟ್ ಸಂಖ್ಯೆ ಲಕ್ಷಗಳು | ಟೆಂಡರಿಗಿಟ್ಟ ಮೊತ್ತ | ಮುಂಗಡ ಠೇವಣಿ ಮೊತ್ತ |
|---|---|---|---|
| 1 | RDWSS/ 2023-24/IND0053 | 16.622 ಲಕ್ಷಗಳು | ರೂ. 41600.00 |
| 2 | RDWSS/ 2023-24/IND0054 | 8.145 ಲಕ್ಷಗಳು | ರೂ. 20400.00 |

ಈ ಕಾಮಗಾರಿಗಳ ವಿವರಗಳಿಗಾಗಿ ಹಾಗೂ ಡೌನಲೋಡ ಮಾಡಿಕೊಳ್ಳಲು ಗುತ್ತಿಗೆದಾರರು ಕರ್ನಾಟಕ ಸರಕಾರದ "ಇ ಪ್ರೋಕ್ಯೂರಮೆಂಟ್" ವೆಬ್ಸೈಟ್ https://eproc.karnataka.gov.in ನಲ್ಲಿ ನೋಡಿಕೊಳ್ಳಬಹುದು. ಟೆಂಡರ ಸಲ್ಲಿಸಲು ಪ್ರಾರಂಭವಾಗುವ ದಿನಾಂಕ: 20.11.2023, ಪ್ರಶ್ನೋತ್ತರದ ಕೊನೆಯ ದಿನಾಂಕ:29.11.2023 ಟೆಂಡರ ಸ್ವೀಕರೀಸುವ ಕೊನೆಯ ದಿನಾಂಕ: 1.12.2023, ಬಿಡ್ ತೆರೆಯುವ ದಿನಾಂಕ: 4.12.2023.

Note: All Chemicals Should be as per Codes mentioned in Bid document, Glasswares should be as per Catalog mentioned in Bid document, remaining should be of A grade & Instruments should be of Good quality and Recent/New Model for the Standard Procedure of lab.

ಸಹಿ/- ಕಾರ್ಯನಿರ್ವಾಹಕ ಇಂಜಿನೀಯರರು,
ಗ್ರಾ.ಕು.ನೀ.ಸ & ನೈ ವಿಭಾಗ, ಗದಗ.
ವಾ.ಸಾ.ಇ/ಗದಗ/304/ದೇಶಪಾಂಡೆಪಬ್ಲಿಸಿಟಿ/2023-24

## ಜಿಲ್ಲಾ ಮಟ್ಟದ ಯುವಜನೋತ್ಸವ ಸ್ಪರ್ಧೆಯ ಫಲಿತಾಂಶದ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ನವೆಂಬರ್ 18 ರಂದು ಆದರ್ಶ ಶಿಕ್ಷಣ ಸಮಿತಿ ಗದಗ ಇಲ್ಲಿ ನಡೆದ 2023-24ನೇ ಸಾಲಿನ ಗದಗ ಜಿಲ್ಲಾ ಮಟ್ಟದ ಯುವಜನೋತ್ಸವ ಸ್ಪರ್ಧೆಯಲ್ಲಿ ಭಾಗವಹಿಸಿ ವಿಜೇತರಾದ ಸ್ಪರ್ಧಾಳುಗಳ ಫಲಿತಾಂಶದ ವಿವರ ಈ ಕೆಳಗಿನಂತಿದೆ.

**ಜಾನಪದ ನೃತ್ಯ ( ತಂಡ) :** ಪ್ರಥಮ- ಶಿವಯೋಗಿ ಮತ್ತು ತಂಡ , ದ್ವಿತೀಯ- ಎ.ಎಸ್.ಎಸ್.ಪಿ.ಯು.ಕಾಲೇಜ, ತೃತೀಯ ಚೈತನ್ಯ ಡ್ಯಾನ್ಸ್ ಅಕಾಡೆಮಿ ಮತ್ತು ತಂಡ. ಜಾನಪದ ಗೀತೆ ( ತಂಡ): ಪ್ರಥಮ- ಮೈಲಾರಪ್ಪ ಕಟ್ಟಿಮನಿ ಮತ್ತು ತಂಡ , ದ್ವಿತೀಯ - ಶಿವಯೋಗಿ ಮತ್ತು ತಂಡ , **ತೃತೀಯ- ತನುಜಾ ಮತ್ತು ತಂಡ. ಜಾನಪದ ನೃತ್ಯ ( ವೈಯಕ್ತಿಕ) :** ಪ್ರಥಮ- ವರ್ಷಾ ಕಲಕಂಬಿ, ದ್ವಿತೀಯ- ಗಿರಿ ಮಲ್ಲಿಕಾ. **ಜಾನಪದ ಗೀತೆ ( ವೈಯಕ್ತಿಕ) :** ಪ್ರಥಮ - ಮೈಲಾರಪ್ಪ ಹರಿಜನ , ದ್ವಿತೀಯ- ಸೌಜನ್ಯ ಶಿಂಧೆ , **ತೃತೀಯ ಚಿದಾನಂದ ಅನವಾಳ. ಕಥೆ ಬರೆಯುವುದು ( ವೈಯಕ್ತಿಕ):** ಪ್ರಥಮ- ನಂದೀಶ ವಾಲಿ, ದ್ವಿತೀಯ- ನೀಲಮ್ಮ ಕೆ.ಟಿ. ತೃತೀಯ- ರಕ್ಷಿತಾ ಗೋಟೂರ. ಪೋಸ್ಟರ್ ಮೇಕಿಂಗ್ ( ಬಿತ್ತಿ ಪತ್ರ ತಯಾರಿಕೆ) ( ವೈಯಕ್ತಿಕ ) - ಪ್ರಥಮ- ವೀರೇಶ ವಿ, ದ್ವಿತೀಯ- ಲಕ್ಷ್ಮೀ ಮಾಗಡಿ, ತೃತೀಯ- ಕೌಸರ್ ತೋಟದಮನಿ, ಘೋಷಣೆ ( ಆಶು ಭಾಷಣ) : ಪ್ರಥಮ- ಮಾರುತಿ ಪರಿಮಳದ, ದ್ವಿತೀಯ- ರಮೇಶ ಹಂಸನೂರ **ತೃತೀಯ- ನಿಧಿ ಪಾಲರೇಶ. ಛಾಯಾಚಿತ್ರಣ( ವೈಯಕ್ತಿಕ) ಫೋಟೋಗ್ರಾಫಿ:-** ಪ್ರಥಮ - ಆದರ್ಶ ಸೊರಟೂರ, ದ್ವಿತೀಯ- ಅಪರೂಪ ಭದ್ರಕಾಳಮ್ಮನಮಠ , ತೃತೀಯ- ಭರತಕುಮಾರ ರೋಣ.

## ನ. 21ರಂದು ಲೋಕಾಯುಕ್ತರಿಂದ ಅಹವಾಲು ಸ್ವೀಕಾರ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಲೋಕಾಯುಕ್ತ ಗದಗ ಕಚೇರಿಯ ಪೊಲೀಸ್ ಅಧಿಕಾರಿಗಳು ಜಿಲ್ಲೆಯ ಶಿರಹಟ್ಟಿ ತಹಸೀಲ್ದಾರ ಕಾರ್ಯಲಯದಲ್ಲಿ ನವೆಂಬರ್ 21ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಸಾರ್ವಜನಿಕರಿಂದ ದೂರು ಸ್ವೀಕಾರ ಮಾಡಲಿದ್ದಾರೆ.

ಯಾವುದೇ ಸರಕಾರಿ ಅಧಿಕಾರಿ ಅಥವಾ ನೌಕರರು ಸರ್ಕಾರಿ ಸೇವೆ ಒದಗಿಸುವಲ್ಲಿ ಲಂಚಕ್ಕೆ ಬೇಡಿಕೆ ಇಟ್ಟಲ್ಲಿ, ಅನಾವಶ್ಯಕ ವಿಳಂಬ ಮಾಡುತ್ತಿದ್ದಲ್ಲಿ, ಯಾವುದಾದರು ಸರ್ಕಾರಿ ಭೂಮಿಗಳ ಒತ್ತುವರಿಯಾಗಿದ್ದಲ್ಲಿ, ಕಾಮಗಾರಿಗಳಲ್ಲಿ ಅಕ್ರಮ ಅಥವಾ ಕಳಪೆ ಕಾರ್ಯ ನಡೆದಿದ್ದಲ್ಲಿ, ಆ ಬಗ್ಗೆ ದೂರು ನೀಡಬಹುದಾಗಿದೆ ಎಂದು ಕರ್ನಾಟಕ ಲೋಕಾಯುಕ್ತ ಆರಕ್ಷಕ ಉಪ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮುಖ್ಯಮಂತ್ರಿಗಳಿಂದ ಪ.ಮಲ್ಲೇಶ್ ಅವರ ಬುದ್ಧ ನಾಗಾರ್ಜುನರ ಶೂನ್ಯಯಾನ ಪುಸ್ತಕ ಲೋಕಾರ್ಪಣೆ

# ಪ. ಮಲ್ಲೇಶ್ ಅವರು ಅಪ್ಪಟ ಸಮಾಜವಾದಿ



■ವಿಜಯಸಾಕ್ಷಿ ಸುದ್ದಿ, ಮೈಸೂರು

ಪ. ಮಲ್ಲೇಶ್ ಅವರು ಅಪ್ಪಟ ಸಮಾಜವಾದಿಯಾಗಿದ್ದರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಶನಿವಾರ ಪ.ಮಲ್ಲೇಶ್ ರಚಿಸಿರುವ ಬುದ್ಧ ನಾಗಾರ್ಜುನರ ಶೂನ್ಯಯಾನ ಪುಸ್ತಕವನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದರು.

ನನಗೆ ರಾಜಕೀಯದ ಗೀಳು ಬರಬೇಕಾದರೆ ಪ್ರೊ. ನಂಜುಂಡಸ್ವಾಮಿ ಹಾಗೂ ಮಲ್ಲೇಶ್ ಕಾರಣ. ಅವರು ನನ್ನಂಥ ಯುವಕರಿಗೆ ಮಾರ್ಗದರ್ಶಕರಾಗಿದ್ದರು ಹಾಗೂ ನಮ್ಮ ಏಳಿಗೆಯನ್ನು ಬಯಸುತ್ತಿದ್ದರು. ಬದ್ಧತೆಯ ಪ್ರಾಮಾಣಿಕ ರಾಜಕಾರಣ ಮಾಡಬೇಕು ಎಂದು ತಿಳಿಸುತ್ತಿದ್ದರು. ರಾಜಕೀಯವಾಗಿ ನಮ್ಮ ನಡುವೆ ಆತ್ಮೀಯ ಸ್ನೇಹವಿತ್ತು. ತಪ್ಪು ಮಾಡಿದ್ದನ್ನು ಹೇಳುವ ಎದೆಗಾರಿಕೆ ಅವರಿಗೆ ಇತ್ತು ಎಂದರು.

ಒಮ್ಮೆ ಮಲ್ಲೇಶ್ ಅವರು ಊಟಕ್ಕೆ ಕರೆದಿದ್ದ ಸಂದರ್ಭದಲ್ಲಿ ಜೋರು ಜಗಳ ನಡೆದರೂ ಭಂಡತನದಿಂದ ಊಟ ಮುಗಿಸಿಯೇ ಹೊರಬಂದೆ ಎಂದು ಮುಖ್ಯಮಂತ್ರಿಗಳು ಸ್ವಾರಸ್ಯಕರ ಘಟನೆಯನ್ನು ಮೆಲುಕು ಹಾಕಿದರು. ಮರುದಿನವೇ ತಮ್ಮನ್ನು ಕರೆದು ಮಾತನಾಡಿಸುತ್ತಿದ್ದ ನಿರ್ಮಲ ಹೃದಯದ ಮಲ್ಲೇಶ್ ಅವರು ಮನಸ್ಸಿನಲ್ಲಿ ಯಾವುದೇ ದ್ವೇಷ ಅಸೂಯೆಯನ್ನು ಇಟ್ಟುಕೊಳ್ಳುತ್ತಿರಲಿಲ್ಲ. ಭಾರತದ ಸಮಾಜದಲ್ಲಿ ಯಾರೂ ಅನ್ಯಾಯಕ್ಕೆ ಒಳಗಾಗಬಾರದು. ಯಾರೇ ಅನ್ಯಾಯಕ್ಕೊಳಗಾದರೂ ಅದರ ವಿರುದ್ಧ ಹೋರಾಟ ಮಾಡುವವರ ಪೈಕಿ ಮಲ್ಲೇಶ್ ಮುಂಚೂಣಿಯಲ್ಲಿರುತ್ತಿದ್ದರು ಎಂದರು.

1971 ರಲ್ಲಿ ಮಲ್ಲೇಶ್ ಅವರ ಪರಿಚಯವಾಗಿದ್ದನ್ನು ಸ್ಮರಿಸಿದ ಸಿದ್ದರಾಮಯ್ಯ ಅವರು ಮಲ್ಲೇಶ್ ಅವರೊಂದಿಗಿನ ತಮ್ಮ ಒಡನಾಟವನ್ನು ಮೆಲುಕು ಹಾಕಿದರು. ಪ್ರತಿ ಸೋಮವಾರ ಮಹಾರಾಜ ಕಾಲೇಜಿನ ಕ್ಯಾಂಟೀನ್‌ನಲ್ಲಿ ನಡೆಯುತ್ತಿದ್ದ ಸ್ಟಡಿ ಸರ್ಕಲ್ ಗೆ ತೇಜಸ್ವಿ, ಅನಂತಮೂರ್ತಿ, ಟಿ.ಎನ್. ನಾಗರಾಜ್, ಮಲ್ಲೇಶ್ ಸೇರಿದಂತೆ ಇತರ ಪ್ರಮುಖ ಸಾಹಿತಿಗಳು ಭೇಟಿ ನೀಡುತ್ತಿದ್ದರು ಎಂದು ನೆನೆಸಿಕೊಂಡರು.

ಪುಸ್ತಕವನ್ನು ಕೊಂಡು ಓದುವಂತೆ ಸಲಹೆ ನೀಡಿದ ಸಿಎಂ, ಮಲ್ಲೇಶ್ ಅವರು ಬಹಳಷ್ಟು ಪುಸ್ತಕಗಳನ್ನು ಬರೆಯಬಹುದಿತ್ತು. ಹೋರಾಟಕ್ಕೆ ಹೆಚ್ಚು ಸಮಯ ನೀಡಿದ್ದರಿಂದ ಹೆಚ್ಚು ಪುಸ್ತಕಗಳನ್ನು ಬರೆಯಲು ಸಾಧ್ಯವಾಗಲಿಲ್ಲ. ಸಾಹಿತ್ಯಾಸಕ್ತಿ, ಬರೆಯುವ ಆಸಕ್ತಿ ಇದ್ದರೂ, ಪುಸ್ತಕ ಬರೆಯುವಾಗ ಸಮಾಜವಾದ, ಸಂಸ್ಕೃತಿ, ಭಾಷೆ ಇವುಗಳ ಬಗ್ಗೆ ಹೆಚ್ಚು ಕಾಳಜಿ ಇಟ್ಟುಕೊಂಡು ಹೋರಾಟ ಮಾಡುತ್ತಿದ್ದರು ಎಂದರು.

ಸಮಾರಂಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ: ಹೆಚ್.ಸಿ.ಮಹದೇವಪ್ಪ, ಮಾಜಿ ಶಾಸಕ ಯತೀಂದ್ರ ಸಿದ್ದರಾಮಯ್ಯ, ವಿಧಾನಪರಿಷತ್ ಸದಸ್ಯ ತಿಮ್ಮಯ್ಯ, ಪತ್ರಕರ್ತ ಜಿ.ಪಿ.ಬಸವರಾಜು, ಸವಿತಾ ಮಲ್ಲೇಶ್, ಉಗ್ರನರಸಿಂಹಗೌಡ, ಅಭಿರುಚಿ ಗಣೇಶ್ ಉಪಸ್ಥಿತರಿದ್ದರು.

### ಜಾತ್ಯಾತೀತ ವ್ಯಕ್ತಿ

ರಾಷ್ಟದಲ್ಲಿ ತುರ್ತು ಪರಿಸ್ಥಿತಿ ಸಂದರ್ಭದಲ್ಲಿ ನಡೆದ ಹೋರಾಟಗಳ ಬಗ್ಗೆ ಸ್ವಾರಸ್ಯಕರ ಘಟನೆಗಳನ್ನು ಮುಖ್ಯಮಂತ್ರಿಗಳು ವಿವರಿಸಿದರು. ಜೀವನದುದ್ದಕ್ಕೂ ಹೋರಾಟಗಳನ್ನು ಮಾಡಿಕೊಂಡು ಬಂದ ಮಲ್ಲೇಶ್, ಪ್ರಜಾಪ್ರಭುತ್ವ, ಸಾಮಾಜಿಕ ನ್ಯಾಯ, ಸಂವಿಧಾನ, ಎಲ್ಲರಿಗೂ ನ್ಯಾಯ ಸಿಗಬೇಕೆಂದು ಮಲ್ಲೇಶ್ ಶ್ರಮಿಸುತ್ತಿದ್ದರು. ಎಂದಿಗೂ ಜಾತಿ ಮಾಡಲಿಲ್ಲ. ಜಾತ್ಯಾತೀತವಾಗಿ ಎಲ್ಲರನ್ನು ನೋಡುತ್ತಿದ್ದರು. ಅವರ ಬಳಿ ಹೋಗುತ್ತಿದ್ದವರೆಲ್ಲಾ ಕೆಳಜಾತಿಯವರೇ ಎಂದರು.



### ಸಂಪೂರ್ಣ ಕ್ರಾಂತಿ ಬಗ್ಗೆ ತುಡಿತ

ದೇಶ ಒಟ್ಟಾಗಿ ಉಳಿಯಬೇಕಾದರೆ, ಕರ್ನಾಟಕದಲ್ಲಿ ಪ್ರಜಾಪ್ರಭುತ್ವ ನೆಲೆಯೂರಬೇಕಾದರೆ, ದ್ವೇಷದ ರಾಜಕಾರಣ ಹೋಗಬೇಕಾದರೆ ಸಿದ್ದರಾಮಯ್ಯನವಂತವರೇ ಪುನ: ಮುಖ್ಯಮಂತ್ರಿಗಳಾಗಬೇಕೆಂದು ರಾಹುಲ್ ಗಾಂಧೀ ಸೇರಿದಂತೆ ಮಲ್ಲೇಶ್ ಕೂಡ ಬಯಸಿದ್ದರು. ಖಡಕ್ ಆಗಿ ಮಾತನಾಡುತ್ತಿದ್ದ ಮಲ್ಲೇಶ್, ಸಮಾಜದಲ್ಲಿ ಬದಲಾವಣೆಗೆ ಸಂಪೂರ್ಣ ಕ್ರಾಂತಿಯಾಗಬೇಕೆಂದು ಜೆಪಿ ಹೇಳಿದಂತೆ ಸಂಪೂರ್ಣ ಕ್ರಾಂತಿ ಬಗ್ಗೆ ತುಡಿತವಿತ್ತು. ಎಷ್ಟೇ ತೊಂದರೆಯಿದ್ದರೂ ಹೋರಾಟ ನಿಲ್ಲಿಸುತ್ತಿರಲಿಲ್ಲ. ರಾಜಕೀಯವಾಗಿ ಮೇಲೆ ಬರುವವರಿಗೆ ಪ್ರೋತ್ಸಾಹ ಮಾಡುತ್ತಿದ್ದರು. ಹೇಳಿದಂತೆ ನಡೆದುಕೊಳ್ಳುವ ಪ್ರಾಮಾಣಿಕ ವ್ಯಕ್ತಿ ಎಂದು ವಿವರಿಸಿದರು.

## ಸಂಗೀತಕ್ಕೆ ಸೋಲದ ಮನಸ್ಸುಗಳೇ ಇಲ್ಲ



■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಬಸವಾನಂದ ಶಿವಯೋಗಿಗಳವರ ಸೇವೆ ಸಿಗುವುದು ದುರ್ಲಭ. ಸಿಕ್ಕರೆ ಬಹುಲಾಭ ಎಂದು ಮಾಜಿ ಸೈನಿಕ ನಾಗಪ್ಪ ಸಂಬಾಪೂರ ಹೇಳಿದರು.

ಅವರು ತಾಲೂಕಿನ ಹರ್ಲಾಪೂರ ಗ್ರಾಮದ ಬಸವಾನಂದ ಶಿವಯೋಗಿಗಳವರ ಬಸವಾನಂದ ಸಾಂಸ್ಕೃತಿಕ ಸೇವಾ ಸಂಸ್ಥೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಸುಗಮ ಸಂಗೀತೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಸೇವಾ ಸಂಸ್ಥೆಯ ಅಧ್ಯಕ್ಷ ವೇದಮೂರ್ತಿ ಫಕೀರಯ್ಯ ಸ್ವಾಮಿಗಳು ಮಾತನಾಡಿ, ಮನಸ್ಸು ಹಗುರವಾಗಬೇಕಾದರೆ ಸಂಗೀತ ಬಹಳ ಅವಶ್ಯ. ಸಂಗೀತಕ್ಕೆ ಸೋಲದ ಮನಸುಗಳೇ ಇಲ್ಲ. ಪ್ರತಿಯೊಬ್ಬರೂ ಸಂಗೀತ ಕೇಳಿ ಪುನೀತರಾಗಬೇಕೆಂದು ಹೇಳಿದರು.

ಕಾರ್ಯಕ್ರಮದಲ್ಲಿ ಶರಣುಕುಮಾರ ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು. ಪಂಚಾಕ್ಷರಿ ಹಾರ್ಮೋನಿಯಂ ಸಾಥ್ ನೀಡಿದರು. ಅಡಿವೇಶಕುಮಾರ ತಬಲಾ ಸಾಥ್ ನೀಡಿದರು. ಶಿವಾನಂದ್ ಮುಂಡರಗಿ, ರವಿ ಗೌಡ್ರ, ಕುತುಬುದ್ದೀನ್ ಹಬ್ಬಣ್ಣಿ, ನಾಗಪ್ಪ ನಾಗರಾಳ, ಬಸವಾನಂದಸ್ವಾಮಿ ಸಮಿತಿ ಅಧ್ಯಕ್ಷರು, ಸರ್ವ ಸದಸ್ಯರು ಪಾಲ್ಗೊಂಡಿದ್ದರು. ಸದಾನಂದ ಶಾಸ್ತ್ರಿಗಳು ಕಾರ್ಯಕ್ರಮ ನಿರೂಪಿಸಿದರು. ಸವಿತಾ ಹರ್ತಿಮಠ ವಂದಿಸಿದರು.

## ವಿಶ್ವಕಪ್ ಕ್ರಿಕೆಟ್‌ನಲ್ಲಿ ಭಾರತದ ಗೆಲುವಿಗಾಗಿ ವಿಶೇಷ ಪೂಜೆ

■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ರವಿವಾರ ನಡೆಯಲಿರುವ ವಿಶ್ವಕಪ್ ಕ್ರಿಕೆಟ್‌ನಲ್ಲಿ ಭಾರತದ ತಂಡ ಗೆಲುವು ಸಾಧಿಸಲೆಂದು ಪ್ರಾರ್ಥಿಸಿ ಬೆಟಗೇರಿ ಗೆಳೆಯರ ಬಳಗದಿಂದ ಶನಿವಾರ ಮುಂಜಾನೆ ತಮಿಳುನಾಡಿನ ಗೋಲ್ಡನ್ ಟೆಂಪಲ್‌ನಲ್ಲಿರುವ ಶ್ರೀ ಮಹಾಲಕ್ಷ್ಮೀಗೆ ವಿಶೇಷ ಪೂಜೆ ಸಲ್ಲಿಸಿದರು.

ಬೆಟಗೇರಿಯಿಂದ 70 ಜನ ಅಭಿಮಾನಿಗಳು ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ, ಭಾರತದ ಕ್ರಿಕೆಟ್ ತಂಡಕ್ಕೆ ಶುಭ ಕೋರಿದರು ಎಂದು ಗಣೇಶಸಿಂಗ್ ಬ್ಯಾಳಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಮಾಜದಿಂದ ಪಡೆದ ಫಲ ಸಮಾಜಕ್ಕೆ ಅರ್ಪಿತ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮಾಜ ನಮಗೇನು ಮಾಡಿದೆ ಎನ್ನುವುದಕ್ಕಿಂತ ಸಮಾಜಕ್ಕೆ ನಮ್ಮ ಕೊಡುಗೆ ಏನು ಎಂಬ ಚಿಂತನೆಯೊಂದಿಗೆ ಸಮಾಜ ಸೇವೆ ಸಲ್ಲಿಸಿದರೆ ಅದರಿಂದ ಸಂತೃಪ್ತಿ, ಸತ್ಫಲ ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಲಕ್ಷ್ಮೇಶ್ವರದ ಎಂಜಿಎಂ ಫೌಂಡೇಶನ್ ಶೈಕ್ಷಣಿಕ, ಧಾರ್ಮಿಕ, ಸಾಮಾಜಿಕ, ಪರಿಸರ ಸೇವೆಯಲ್ಲಿ ಸಮರ್ಪಿಸಿಕೊಂಡಿದೆ ಎಂದು ಎಂಜಿಎಂ ಫೌಂಡೇಶನ್ ಕಾರ್ಯದರ್ಶಿ ಬಸವೇಶ ಮಹಾಂತಶೆಟ್ಟರ ಹೇಳಿದರು.

ಅವರು ಎಂಜಿಎಂ ಯೂನಿವರ್ಸಲ್ ಸ್ಕೂಲ್‌ನಲ್ಲಿ ಉಚಿತ ಕಂಪ್ಯೂಟರ್ ತರಬೇತಿ ಪ್ರಮಾಣಪತ್ರ ಹಾಗೂ ಬಡ-ಪ್ರತಿಭಾವಂತ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ವಿತರಣೆ, ಮಕ್ಕಳ ದಿನಾಚರಣೆ, ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿ, ಕನ್ನಡ ಭಾಷೆಯ ಬಗ್ಗೆ ಅಭಿಮಾನ, ಸ್ವಾಭಿಮಾನವಿರಲಿ. ಪ್ರತಿಯೊಬ್ಬರಿಗೂ ಕಂಪ್ಯೂಟರ್ ಜ್ಞಾನದ ಅವಶ್ಯತೆಯಿದೆ. ಕನ್ನಡ ಮಾತೃಭಾಷೆಯಾಗಿದ್ದು ಅದು ಬದುಕಿನ ಅಂಗವಾಗಬೇಕು. ಇಂಗ್ಲೀಷ್ ಮತ್ತು ಇತರೆ ಭಾಷೆಗಳು ಕೇವಲ ಜ್ಞಾನಕ್ಕಾಗಿ ಬೇಕು ಎಂದರು.

ಎಂಜಿಎಂ ಫೌಂಡೇಶನ್ ಸಹಕಾರದೊಂದಿಗೆ ವಿಶ್ವ ಕಂಪ್ಯೂಟರ್ ಅಕಾಡೆಮಿಯಿಂದ ಉಚಿತ ಕಂಪ್ಯೂಟರ್ ತರಬೇತಿ ಪಡೆದ ನೂರಕ್ಕೂ ಹೆಚ್ಚು ಜನರಿಗೆ ಪ್ರಮಾಣ ಪತ್ರ, 46 ವಿದ್ಯಾರ್ಥಿಗಳಿಗೆ ಎರಡು ಲಕ್ಷಕ್ಕೂ ಅಧಿಕ ಮೊತ್ತದ ವಿದ್ಯಾರ್ಥಿವೇತನ ವಿತರಿಸಲಾಯಿತು.

ಬಿಆರ್‌ಸಿ ಮತ್ತು ತಾಲೂಕಾ ಕಸಾಪ ಅಧ್ಯಕ್ಷ ಈಶ್ವರ ಮೆಡ್ಲೇರಿ ಮಾತನಾಡಿ, ಶಿಕ್ಷಣ ಮತ್ತು ಸಮಾಜ ಸೇವೆಯಲ್ಲಿ ನಿಸ್ವಾರ್ಥದಿಂದ ತೊಡಗಿಸಿಕೊಂಡಿರುವ ಎಂಜಿಎಂ ಫೌಂಡೇಶನ್‌ನ ಕಾರ್ಯ ಶ್ಲಾಘನೀಯ. ಅವರ ಸೇವೆಯಿಂದ ಬಡ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳ ಬದುಕಿಗೆ ಆಸರೆಯಾಗಲಿದೆ ಎಂದರು.

ಈ ವೇಳೆ ಎಂಜಿಎಂ ಫೌಂಡೇಶನ್ ಮುಖ್ಯಸ್ಥರಾದ ವಿಜಯಕುಮಾರ ಮಹಾಂತಶೆಟ್ಟರ, ವಿಶ್ವ ಕಂಪ್ಯೂಟರ್ ಅಕಾಡೆಮಿ ಅಧ್ಯಕ್ಷ ಬಸವರಾಜ ಸಂಗಪ್ಪಶೆಟ್ಟರ, ಕಂಪ್ಯೂಟರ್ ಶಿಕ್ಷಕಿ ಗೌರಿ ಸಂಗಪ್ಪಶೆಟ್ಟರ, ನಿ.ಶಿಕ್ಷಕ ರಮೇಶ ನವಲೆ ಇದ್ದರು. ಶ್ವೇತಾ ಪೂಜಾರ, ನಾಗರಾಜ ಯಂಡಿಗೇರಿ ನಿರೂಪಿಸಿದರು. ಆಡಳಿತಾಧಿಕಾರಿಗಳು, ಮುಖ್ಯಸ್ಥರು, ಪದಾಧಿಕಾರಿಗಳು ಶಿಕ್ಷಕರು, ಸಿಬ್ಬಂದಿಗಳು ಇದ್ದರು.

### ಯುವ ಮತದಾರರ ನೋಂದಣಿ ಅಭಿಯಾನ ಕಾರ್ಯಕ್ರಮದಲ್ಲಿ ಎನ್.ಕೆ. ನಿರ್ಮಲಾ

## ನಾಯಕನ ಆಯ್ಕೆಗೆ ನಿಮ್ಮ ಮತ ಮುಖ್ಯ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ದೇಶವನ್ನು ಸುಭದ್ರವಾಗಿ ನಡೆಸಲು ಉತ್ತಮ ನಾಯಕರ ಆಯ್ಕೆ ಅವಶ್ಯವಾಗಿದ್ದು, 18 ವರ್ಷ ತುಂಬಿದ ಪ್ರತಿಯೊಬ್ಬ ವಿದ್ಯಾರ್ಥಿಗಳೂ ಕಡ್ಡಾಯವಾಗಿ ಮತದಾನ ನೋಂದಣಿ ಮಾಡಿಸಿಕೊಳ್ಳಲು ಮುಂದಾಗಿ. ಸರ್ಕಾರ ಪ್ರತಿನಿಧಿಯನ್ನು ಆಯ್ಕೆ ಮಾಡಬೇಕೆಂದರೆ ಮತದಾನ ನೋಂದಣಿ ಮಾಡಿಕೊಳ್ಳಬೇಕು. ಸರ್ಕಾರ ನಡೆಸುವ ನಾಯಕನ ಆಯ್ಕೆಗೆ ನಿಮ್ಮ ಮತ ಮುಖ್ಯವಾಗಿದೆ ಎಂದು ಜಿ.ಪಂ ಯೋಜನಾಧಿಕಾರಿ ಎನ್.ಕೆ. ನಿರ್ಮಲಾ ಹೇಳಿದರು.

ಪಟ್ಟಣದ ಬಿಎಸ್‌ಎಸ್ ಸರ್ಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ತಾಲೂಕಾಡಳಿತ, ತಾಲೂಕು ಸ್ವೀಪ್ ಸಮಿತಿ ಹಾಗೂ ಬಿಎಸ್‌ಎಸ್ ಕಾಲೇಜು ಸಹಯೋಗದಲ್ಲಿ ಶನಿವಾರ ನಡೆದ ಯುವ ಮತದಾರರ ನೋಂದಣಿ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿದರು.

ತಾ.ಪಂ ಕಾರ್ಯನಿರ್ವಾಹಕಾಧಿಕಾರಿ ಡಾ. ಡಿ.ಮೋಹನ್ ಮಾತನಾಡಿ, ತಾಲೂಕಿನಲ್ಲಿ ಶನಿವಾರ, ಭಾನುವಾರ ಮತದಾನ ನೋಂದಣಿ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದರು. ತಹಸೀಲ್ದಾರ್ ಕಿರಣಕುಮಾರ ಕುಲಕರ್ಣಿ ಮಾತನಾಡಿ, 18 ವರ್ಷ ತುಂಬಿದ ಪ್ರತಿಯೊಬ್ಬರಿಗೂ ಪ್ರಜಾಪ್ರಭುತ್ವದಲ್ಲಿ ಮತದಾನದ ಹಕ್ಕನ್ನು ನೀಡಲಾಗಿದೆ. ಎಲ್ಲರೂ ಮತದಾನ ನೋಂದಣಿ ಮಾಡಿಕೊಂಡು ಮುಂಬರುವ ಚುನಾವಣೆಯಲ್ಲಿ ನಿಮ್ಮ ನಾಯಕನ ಆಯ್ಕೆ ಮಾಡಿಕೊಳ್ಳಲು ಮುಂದಾಗಿ ಎಂದರು. ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಮಹೇಂದ್ರ.ಜಿ. ಮಾತನಾಡಿ, ದೇಶದ ಸಮಸ್ಯೆಗಳನ್ನು ಹೋಗಲಾಡಿಸಲು ಉತ್ತಮ ನಾಯಕನ ಆಯ್ಕೆಗೆ ಮತದಾನ ಅವಶ್ಯಕವಾಗಿದೆ. ಮತದಾನ ನೋಂದಣಿ ಅಭಿಯಾನದ ಸದುಪಯೋಗವನ್ನು ವಿದ್ಯಾರ್ಥಿಗಳು ಮಾಡಿಕೊಳ್ಳಿ ಎಂದರು.

ಪಟ್ಟಣದ ಬಿಎಸ್‌ಎಸ್ ಸರ್ಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ 'ಐ ಲವ್ ವೋಟಿಂಗ್' ಎಂದು ಬರೆದು ಅದರ ಮೇಲೆ ವಿದ್ಯಾರ್ಥಿಗಳನ್ನು ಕೂಡಿಸಿ 18 ವರ್ಷ ಪೂರೈಸಿದ ವಿದ್ಯಾರ್ಥಿಗಳಿಗೆ ಮತದಾನ ನೋಂದಣಿ ಜಾಗೃತಿ ಮೂಡಿಸಿದ್ದು ಗಮನ ಸೆಳೆಯಿತು.

ಉಪನ್ಯಾಸಕಿ ಸರಸ್ವತಿ.ಕೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಗ್ರಾಮ ಲೆಕ್ಕಾಧಿಕಾರಿ ಮಾರುತಿ ವಕ್ಕರ ಮತದಾನ ನೋಂದಣಿ ಕುರಿತು ಮಾಹಿತಿ ನೀಡಿದರು. ಉಪನ್ಯಾಸಕರಾದ ಎಂ.ಎಸ್. ಕುಬೇರ ಸ್ವಾಗತಿಸಿದರು. ಪ್ರಕಾಶ ದಿವಾಣದ ನಿರೂಪಿಸಿದರು. ವಾಯ್.ಎಫ್. ಗೌಡರ್ ವಂದಿಸಿದರು. ವಸಂತ ಅನ್ವರಿ, ಪ್ರಿಯಾಂಕ ಅಂಗಡಿ, ಮಂಜುನಾಥ ಹಳ್ಳದ, ಪ್ರವೀಣ ದೂಳಣ್ಣವರ, ರವಿ ಹೊಂಬಳ, ಜ್ಯೋತಿ ವಡ್ಡರ ಮುಂತಾದವರಿದ್ದರು.

## ದಿ. ಇಂದಿರಾ ಗಾಂಧಿಯವರ ಜಯಂತಿ ಕಾರ್ಯಕ್ರಮ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ



ಭಾರತ ಪ್ರಜಾತಂತ್ರದ ಇತಿಹಾಸದಲ್ಲಿ ಮೂರು ಬಾರಿ ಪ್ರಧಾನ ಮಂತ್ರಿಗಳಾಗಿ ದಾಖಲೆ ನಿರ್ಮಿಸಿರುವ ದಿವಂಗತ ಇಂದಿರಾ ಗಾಂಧಿಯವರ ಜಯಂತಿ ಕಾರ್ಯಕ್ರಮವನ್ನು ನಗರದಕಾಟನ್ ಸೇಲ್ ಸೊಸೈಟಿ ಅವರಣದಲ್ಲಿರುವ ಕಾಂಗ್ರೆಸ್ ಕಾರ್ಯಾಲಯದಲ್ಲಿ ನ.19ರಂದು ಬೆಳಿಗ್ಗೆ 10 ಗಂಟೆಗೆ ಆಚರಿಸಲಾಗುವುದು.

ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ ಹಾಗೂ ಮಾಜಿ ಶಾಸಕ ಡಿ.ಆರ್. ಪಾಟೀಲರು ಉಪಸ್ಥಿತರಿರುವರು. ಕಾಂಗ್ರೆಸ್ ಪಕ್ಷದ ಮಾಜಿ ಹಾಗೂ ಹಾಲಿ ಶಾಸಕರು, ಪಕ್ಷದ ಜಿಲ್ಲಾ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು-ಪದಾಧಿಕಾರಿಗಳು, ಜಿ.ಪಂ, ತಾ.ಪಂ, ಗ್ರಾ.ಪಂ, ಎಪಿಎಂಸಿ ಪಕ್ಷದ ಅಧ್ಯಕ್ಷರು-ಸದಸ್ಯರು, ನಗರಸಭೆ, ಪಟ್ಟಣ ಪಂಚಾಯಿತಿ, ಪುರಸಭೆ ಅಧ್ಯಕ್ಷರು-ಸದಸ್ಯರು, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೇತ್ ಮಜದೂರ್ ವಿಭಾಗ, ಮಾಜಿ ಸೈನಿಕರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವೀಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲೀಗಲ್ ರೀಫಾರ್ಮ್ಸ್ ವಿಭಾಗ, ಐಟಿ ಮತ್ತು ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ಇಲಾಖೆ ವಿಭಾಗಗಳ ಅಧ್ಯಕ್ಷರು-ಸದಸ್ಯರು, ಪಕ್ಷದ ಅಭಿಮಾನಿಗಳು ಪಾಲ್ಗೊಳ್ಳಬೇಕೆಂದು ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಬಿ.ಬಿ. ಅಸೂಟಿ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಅಶೋಕ ಮಂದಾಲಿ ವಿನಂತಿಸಿದ್ದಾರೆ.

### ಪತ್ರಿಕಾ ವಿತರಕರ ಯೋಗಕ್ಷೇಮಕ್ಕಾಗಿ ಕಾರ್ಮಿಕ ಸಚಿವ ಸಂತೋಷ್ ಲಾಡ್ ಜೊತೆ ಚರ್ಚೆ: ಕೆ.ವಿ.ಪ್ರಭಾಕರ್

## ಕೋವಿಡ್ ಸಂದರ್ಭದಲ್ಲಿ ಪತ್ರಿಕಾ ವಿತರಕರ ಶ್ರಮ, ಕಾಳಜಿ ದಾಖಲಾರ್ಹ

■ವಿಜಯಸಾಕ್ಷಿ ಸುದ್ದಿ, ಮೈಸೂರು

ಕೋವಿಡ್ ಸಂದರ್ಭದಲ್ಲಿ ಪತ್ರಿಕಾ ವಿತರಕರ ಶ್ರಮ ಮತ್ತು ಕಾಳಜಿ ದಾಖಲಾರ್ಹ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ನುಡಿದರು.

ಕರ್ನಾಟಕ ರಾಜ್ಯ ಪತ್ರಿಕಾ ವಿತರಕರ ಒಕ್ಕೂಟ ಮತ್ತು ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘ ಪತ್ರಕರ್ತರ ಸಂಘದಲ್ಲಿ ಆಯೋಜಿಸಿದ್ದ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಪತ್ರಿಕಾ ವಿತರಕರನ್ನು ಸನ್ಮಾನಿಸಿ ಮಾತನಾಡಿದರು.

ಪತ್ರಿಕಾ ವಿತರಕರು ಪತ್ರಿಕೋದ್ಯಮದ ಪಿಲ್ಲರ್‌ಗಳು. ಕೋವಿಡ್ ಸಂದರ್ಭದಲ್ಲಿ ಪತ್ರಿಕೆ ಮುಟ್ಟಿದರೆ ಕೋರೊನಾ ಬರುತ್ತದೆ ಎನ್ನುವ ಆತಂಕ ವ್ಯಾಪಕವಾಗಿ ಹರಡಿದ್ದಾಗಲೂ ತಮ್ಮ ವೃತ್ತಿಪರತೆಯನ್ನು ಬಿಟ್ಟು ಕೊಡಲಿಲ್ಲ. ಎಂದಿನಂತೆ ಪತ್ರಿಕೆಗಳನ್ನು ವಿತರಿಸಿ ಎದೆಗಾರಿಕೆ ಮೆರೆದರು ಎಂದು ಆ ಸಂದರ್ಭದ ಸಂಕಷ್ಟಗಳನ್ನು ವಿವರಿಸಿದರು.



ಪತ್ರಿಕಾ ವಿತರಕರ ಯೋಗಕ್ಷೇಮಕ್ಕಾಗಿ ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರ ಜತೆ ಚರ್ಚೆ ನಡೆಸುತ್ತೇನೆ. ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘಕ್ಕೆ 2 ಕೋಟಿ ರೂಪಾಯಿ ಕೊಡಿಸಲು ಮುಖ್ಯಮಂತ್ರಿಗಳ ಜತೆ ಚರ್ಚಿಸಿ ಕಾರ್ಯರೂಪಕ್ಕೆ ತರಲು ಈಗಾಗಲೇ ಪ್ರಯತ್ನ ಆರಂಭಿಸಲಾಗಿದೆ. ವಿತರಕರ ಸಂಘಕ್ಕೆ ನಿವೇಶನ ಮತ್ತು ವಿತರಕರಿಗೆ ನಿವೇಶನ ಕೊಡಿಸಬೇಕು ಎನ್ನುವ ಬೇಡಿಕೆ ಕುರಿತಾಗಿಯೂ ಸರ್ಕಾರದ ಬಳಿ ಮನವಿ ಮಾಡುತ್ತೇನೆ ಎಂದು ಕೆ.ವಿ.ಪ್ರಭಾಕರ್ ಅವರು ತಿಳಿಸಿದರು.

ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾದ ಶಿವಾನಂದ ತಗಡೂರು, ರಾಜ್ಯ ಪತ್ರಿಕಾ ವಿತರಕರ ಸಂಘದ ಅಧ್ಯಕ್ಷರಾದ ಕೆ.ಶಂಬುಲಿಂಗ, ಪ್ರಜಾಪ್ರಗತಿ ಪತ್ರಿಕೆ ಸಂಪಾದಕರಾದ ನಾಗಣ್ಣ ಸೇರಿ ಹಲವು ಪ್ರಮುಖರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka